# ಜನಶ್ರೀ ಟೈಮ್ಸ್

ಕನ್ನಡ ದಿನಪತ್ರಿಕೆ

JANASHREE TIMES KANNADA DAILY NEWS PAPER

PRGI NO : KNKAN/26/A0482

ಸಂಪಾದಕರು: ಆನಂದಯ್ಯ ವಿರಕ್ತಮಠ | ಸಂಪುಟ: 01 ಸಂಚಿಕೆ: 43 ಪುಟಗಳು: 04 ಬೆಲೆ: 02 ರೂ. ದಿನಾಂಕ: 05-08-2026 ಬುಧವಾರ | 73536 56555


**ಜನಶ್ರೀವಾಣಿ**

ಜನರಿಂದ ಮತ ಪಡೆದು ಹಿತ ಕಾಯಲಿಲ್ಲ, ಖುರ್ಚಿಗಾಗಿ ಮತದ ಮೌಲ್ಯವನ್ನೇ ಕಳೆವುದೆಂತು ಸರಿ..?

■ ಆನಂದಯ್ಯ ವಿರಕ್ತಮಠ
ಸಂಪಾದಕರು: ಜನಶ್ರೀ ಟೈಮ್ಸ್

## ರಾಜಕೀಯ ಆರಂಭಿಸಿ 25 ವರ್ಷಗಳ ಬಳಿಕ ಮಂತ್ರಿಯಾದ ಕೆ.ಎಂ. ಶಿವಲಿಂಗೇಗೌಡ



ಜನಶ್ರೀ ಟೈಮ್ಸ್ ಸುದ್ದಿ

**ಹಾಸನ:** ಸುಮಾರು 25 ವರ್ಷಗಳ ಸುದೀರ್ಘ ರಾಜಕೀಯ ಜೀವನದ ಬಳಿಕ ಅರಸೀಕೆರೆ ಕ್ಷೇತ್ರದ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಮೊದಲ ಬಾರಿಗೆ ಸಚಿವ ಸಂಪುಟಕ್ಕೆ ಸೇರ್ಪಡೆಯಾಗಿದ್ದು, ಅರಸೀಕೆರೆ ವಿಧಾನಸಭಾ ಕ್ಷೇತ್ರದಿಂದ ಸಚಿವರಾದ ಮೊದಲ ಶಾಸಕರಾಗಿ ಇತಿಹಾಸ ನಿರ್ಮಿಸಿದ್ದಾರೆ.

1958ರ ಫೆಬ್ರವರಿ 14ರಂದು ಅರಸೀಕೆರೆ ತಾಲೂಕಿನ ಕುಡುಕುಂದಿ ಗ್ರಾಮದ ಕೃಷಿಕ ಕುಟುಂಬದಲ್ಲಿ ಜನಿಸಿದ ಶಿವಲಿಂಗೇಗೌಡ ಅವರು ಹಾಸನ ಸರ್ಕಾರಿ ಕಲಾ ಕಾಲೇಜಿನಲ್ಲಿ ಬಿ.ಎ. ಪದವಿ ಪಡೆದಿದ್ದಾರೆ. ಕೃಷಿಯನ್ನು ಮುಖ್ಯ ವೃತ್ತಿಯಾಗಿಸಿಕೊಂಡಿರುವ ಅವರು, ಜೆಡಿಎಸ್ ಪಕ್ಷದ ಮೂಲಕ ರಾಜಕೀಯ ಪ್ರವೇಶಿಸಿ 2001ರಿಂದ 2006ರವರೆಗೆ ಹಾಸನ ಜಿಲ್ಲಾ ಪಂಚಾಯಿತಿ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು. 2004ರ ವಿಧಾನಸಭೆ ಚುನಾವಣೆಯಲ್ಲಿ ಆಗಿನ ಗಂಡಸಿ ಕ್ಷೇತ್ರದಿಂದ ಸ್ಪರ್ಧಿಸಿ ಕಾಂಗ್ರೆಸ್ ಅಭ್ಯರ್ಥಿ ಬಿ.ಶಿವರಾಂ ವಿರುದ್ಧ ಕೇವಲ 18 ಮತಗಳ ಅಂತರದಿಂದ ಸೋತಿದ್ದ ಅವರು, ಕ್ಷೇತ್ರ ಪುನರ್‌ವಿಂಗಡಣೆ ಬಳಿಕ 2008ರಲ್ಲಿ ಅರಸೀಕೆರೆಯಿಂದ ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾದರು. ಬಳಿಕ 2013, 2018 ಹಾಗೂ 2023ರ ವಿಧಾನಸಭೆ ಚುನಾವಣೆಯಲ್ಲೂ ಸತತವಾಗಿ ಗೆಲುವು ಸಾಧಿಸಿ ಕ್ಷೇತ್ರದ ಅಜೇಯ ನಾಯಕರಾಗಿ ಹೊರಹೊಮ್ಮಿದರು. 2023ರ ಚುನಾವಣೆಗೆ ಮುನ್ನ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ಶಿವಲಿಂಗೇಗೌಡ ಅವರು ಹೊಸ ಪಕ್ಷದಲ್ಲಿಯೂ ಗೆಲುವು ದಾಖಲಿಸಿ ನಾಲ್ಕನೇ ಬಾರಿ ವಿಧಾನಸಭೆ ಪ್ರವೇಶಿಸಿದರು. ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದ ಅವರು ಇದೀಗ ಸಚಿವ ಸ್ಥಾನ ಅಲಂಕರಿಸಿದ್ದು, ಅವರ ನೇಮಕಾತಿ ಅರಸೀಕೆರೆ ಕ್ಷೇತ್ರದ ರಾಜಕೀಯ ಇತಿಹಾಸದಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಸಚಿವ ಸ್ಥಾನದಿಂದ ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗುವ ನಿರೀಕ್ಷೆ ವ್ಯಕ್ತವಾಗಿದೆ.

## ಸಚಿವ ಸ್ಥಾನ ಕೈತಪ್ಪಿದಕ್ಕೆ ರಾಜೀನಾಮೆಗೆ ಮುಂದಾದ ತನ್ವೀರ್ ಸೇಠ್

ಜನಶ್ರೀ ಟೈಮ್ಸ್ ಸುದ್ದಿ

**ಮೈಸೂರು:** ನಿನ್ನೆ ನಡೆದ ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ಮೈಸೂರಿನ ಶಾಸಕ ತನ್ವೀರ್ ಸೇಠ್ ಅವರಿಗೆ ಸಚಿವ ಸ್ಥಾನ ಸಿಗದ ಹಿನ್ನೆಲೆಯಲ್ಲಿ ಅವರ ಬೆಂಬಲಿಗರು ಮತ್ತು ಅಭಿಮಾನಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಶಾಸಕ ಸ್ಥಾನ ಮತ್ತು ಕಾಂಗ್ರೆಸ್ ಸದಸ್ಯತ್ವಕ್ಕೆ ರಾಜೀನಾಮೆ ನೀಡುವಂತೆ ಬಿಗಿಪಟ್ಟು ಹಿಡಿದಿದ್ದಾರೆ. ಇಂದೇ ರಾಜೀನಾಮೆ ನೀಡುವಂತೆ ಕಾರ್ಯಕರ್ತರು ಆಗ್ರಹಿಸಿದ್ದಾರೆ. ಸಚಿವ ಸ್ಥಾನ ಕೈತಪ್ಪಿದ ವಿಚಾರ ತಿಳಿಯುತ್ತಿದ್ದಂತೆ ತನ್ವೀರ್ ಸೇಠ್ ಅವರ ಬೆಂಬಲಿಗರು ಮೈಸೂರಿನಲ್ಲಿ ಜಮಾಯಿಸಿದರು. ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ, ಕಾಂಗ್ರೆಸ್ ಸದಸ್ಯತ್ವಕ್ಕೂ ರಾಜೀನಾಮೆ ನೀಡಿ, ಇಂದೇ ರಾಜೀನಾಮೆ ನೀಡಿ ಎಂದು ಕಾರ್ಯಕರ್ತರು ಶಾಸಕರನ್ನು ಒತ್ತಾಯಿಸಿದರು. ಕಾರ್ಯಕರ್ತರ ಮನವೊಲಿಕೆ ಸಾಧ್ಯವಾಗದೆ ತನ್ವೀರ್ ಸೇಠ್ ಅವರು ಬೆಂಗಳೂರಿಗೆ ತೆರಳಿದ್ದಾರೆ ಎಂದು ತಿಳಿದುಬಂದಿದೆ. ತನ್ವೀರ್ ಸೇಠ್ ಅವರ ಅಭಿಮಾನಿಗಳು ರಾಜೀನಾಮೆ ನೀಡಲು ಸಿದ್ಧತೆ ನಡೆಸಿದ್ದು, ನೂರಾರು ಕಾರ್ಯಕರ್ತರು ಇಂದು ಬೆಂಗಳೂರಿಗೆ ತೆರಳಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಮತ್ತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಸಾಮೂಹಿಕ ರಾಜೀನಾಮೆ ನೀಡಲು ಮುಂದಾಗಿದ್ದಾರೆ ಎನ್ನಲಾಗಿದೆ. ರಾಜೀನಾಮೆ ನೀಡಲು ತೆರಳಿರುವವರಲ್ಲಿ ಮಾಜಿ ಮಹಾನಗರ ಪಾಲಿಕೆ ಸದಸ್ಯರಾದ ಶೌಕತ್ ಪಂಡು, ಬಷೀರ್, ಶ್ರೀಧರ್, ಪ್ರದೀಪ್ ಚಂದ್ರ, ಬ್ಲಾಕ್ ಅಧ್ಯಕ್ಷ ಸಯ್ಯದ್ ಇಕ್ಬಾಲ್, ಮಂಜುನಾಥ್, ಎಂಡಿಸಿಸಿ ಮಂಜುನಾಥ್, ಅಫ್ತಾಬ್ ಅಕಲ್ ಸೇರಿದಂತೆ ಹಲವು ಕಾಂಗ್ರೆಸ್ ಕಾರ್ಯಕರ್ತರು ಇದ್ದಾರೆ. ಸಂಪುಟ ವಿಸ್ತರಣೆಯ ಬಳಿಕ ಹಿರಿಯ ಶಾಸಕರಿಗೆ ಸ್ಥಾನ ನೀಡದಿರುವುದರಿಂದ ಕಾಂಗ್ರೆಸ್‌ನಲ್ಲಿ ಅಸಮಾಧಾನದ ಬಿಸಿ ಹೆಚ್ಚಾಗಿದೆ. ತನ್ವೀರ್ ಸೇಠ್ ಅವರು 5 ಬಾರಿ ಶಾಸಕರಾಗಿ ಆಯ್ಕೆಯಾಗಿದ್ದು, ಹಿರಿತನದ ಆಧಾರದ ಮೇಲೆ ಸಚಿವ ಸ್ಥಾನ ನಿರೀಕ್ಷಿಸಿದ್ದರು. ಈ ಬೆಳವಣಿಗೆಯಿಂದ ಪಕ್ಷದ ಹೈಕಮಾಂಡ್ ಮುಂದೆ ಮತ್ತೊಂದು ತಲೆನೋವು ಎದುರಾಗಿದೆ. ನಾಯಕರು ಕಾರ್ಯಕರ್ತರನ್ನು ಹೇಗೆ ಸಮಾಧಾನಪಡಿಸುತ್ತಾರೆ ಎಂಬುದು ಕುತೂಹಲ ಮೂಡಿಸಿದೆ.


**ಜನಶ್ರೀ ಟೈಮ್ಸ್**

**ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**


### ಸ್ಪೀಕರ್ ಆಗಿ ಆಯ್ಕೆಯಾದ ರೋಣ ಶಾಸಕ ಜಿ.ಎಸ್. ಪಾಟೀಲ ಹೆಚ್.ಕೆ. ಪಾಟೀಲಗೆ ಮತ್ತೆ ನಿರಾಸೆ

# ಗದಗ ಜಿಲ್ಲೆಗೆ ಕೈ ತಪ್ಪಿದ ಸಚಿವ ಸ್ಥಾನ

ಜನಶ್ರೀ ಟೈಮ್ಸ್ ಸುದ್ದಿ

**ಗದಗ:** ರಾಜ್ಯ ಸಚಿವ ಸಂಪುಟದ ಎರಡನೇ ಹಂತದ ವಿಸ್ತರಣೆಯಲ್ಲೂ ಗದಗ ಜಿಲ್ಲೆಗೆ ಸಚಿವ ಸ್ಥಾನ ದೊರೆಯದಿರುವುದು ಜಿಲ್ಲೆಯ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಜನರಲ್ಲಿ ನಿರಾಸೆ ಮೂಡಿಸಿದೆ. ಜಿಲ್ಲೆಯ ಹಿರಿಯ ಕಾಂಗ್ರೆಸ್ ನಾಯಕ, ಮಾಜಿ ಸಚಿವ ಹಾಗೂ ಗದಗ ಶಾಸಕ ಹೆಚ್.ಕೆ. ಪಾಟೀಲ ಅವರಿಗೆ ಈ ಬಾರಿಯೂ ಸಚಿವ ಸ್ಥಾನ ಕೈತಪ್ಪಿದೆ. ಆದ-'ರೆ, ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿಯಾಗಿದ್ದ ರೋಣ ಶಾಸಕ ಜಿ.ಎಸ್. ಪಾಟೀಲ ಅವರಿಗೆ ವಿಧಾನಸಭೆಯ ಸ್ಪೀಕರ್ ಹುದ್ದೆ ದೊರೆತಿ-ದ್ದು, ಜಿಲ್ಲೆಯ ರಾಜಕೀಯಕ್ಕೆ ಮಹತ್ವದ ಗೌರವ ಸಿಕ್ಕಂತಾಗಿದೆ. ರಾಜ್ಯದ ಅತ್ಯುನ್ನತ ಸಾಂವಿಧಾನಿಕ ಹುದ್ದೆಗಳಲ್ಲಿ ಒಂದಾದ ಸ್ಪೀಕರ್ ಸ್ಥಾನಕ್ಕೆ ಅವರ ಆಯ್ಕೆ ಗದಗ ಜಿಲ್ಲೆಯ ಪಾಲಿಗೆ ಹೆಮ್ಮೆಯ ವಿಷಯವಾಗಿದೆ.

ಸಚಿವ ಸ್ಥಾನಕ್ಕಾಗಿ ಜಿಲ್ಲೆಯ ಇಬ್ಬರು ನಾಯಕರ ಬೆಂಬಲಿಗರು ಹಲವು ರೀತಿಯ ಹೋರಾಟಗಳನ್ನು ನಡೆಸಿದ್ದರು. ಹೆಚ್.ಕೆ. ಪಾಟೀಲ ಅವರ ಬೆಂಬಲಿಗರು ಗದಗದಲ್ಲಿ ಪಾದಯಾತ್ರೆ ನಡೆಸಿ ಪಕ್ಷದ ವ-ರಿಷ್ಠರ ಗಮನ ಸೆಳೆದರೆ, ಜಿ.ಎಸ್. ಪಾಟೀಲ ಅವರ ಅಭಿಮಾನಿಗಳು ದೀರ್ಘದಂಡ ನಮಸ್ಕಾರ, ತುಮಕೂರಿನಿಂದ ಬೆಂಗಳೂ-





ರಿನವರೆಗೆ ಪಾದಯಾತ್ರೆ ಹಾಗೂ ಕೆಪಿಸಿಸಿ ಕಚೇರಿಯಲ್ಲಿ ಬೃಹತ್ ಸಭೆ ನಡೆಸುವ ಮೂಲಕ ತಮ್ಮ ನಾಯಕನಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿದ್ದರು. ಆದರೆ, ಅಂತಿಮವಾಗಿ ಸಚಿವ ಸಂಪುಟದ ಎರಡನೇ ಪಟ್ಟಿಯಲ್ಲೂ ಗದಗ ಜಿಲ್ಲೆಗೆ ಸಚಿವ ಸ್ಥಾನ ದೊರೆಯಲಿಲ್ಲ. ಇದರಿಂದ ಜಿಲ್ಲೆಯ ಕಾಂಗ್ರೆಸ್ ವಲಯದಲ್ಲಿ ಅಸಮಾಧಾನ ವ್ಯಕ್ತವಾಗಿದ್ದರೂ, ಜಿ.ಎಸ್. ಪಾಟೀಲ ಅವರು ವಿಧಾನಸಭೆಯ ಸ್ಪೀಕರ್ ಆಗಿ ನೇಮಕಗೊಂಡಿರುವುದು ಜಿಲ್ಲೆಯ ರಾಜಕೀಯ ಪ್ರತಿನಿಧಿತ್ವಕ್ಕೆ ಹೊಸ ಆಯಾಮ ನೀಡಿದೆ. ಸಚಿವ ಸ್ಥಾನ ಕೈತಪ್ಪಿದ ನೋವಿನ ನಡುವೆಯೇ ಸ್ಪೀಕರ್ ಹುದ್ದೆ ಗದಗ ಜಿಲ್ಲೆಯ ಪಾಲಾಗಿರುವುದು ರಾಜಕೀಯವಾಗಿ ಮಹತ್ವದ ಬೆಳವಣಿಗೆಯಾಗಿ ಪರಿಣಮಿಸಿದೆ.

ಸಾಮೂಹಿಕ ರಾಜೀನಾಮೆ ಎಚ್ಚರಿಕೆ ಮಾಜಿ ಸಚಿವ ಹೆಚ್.ಕೆ ಪಾಟೀಲರಿಗೆ ಸಚಿವ ಸ್ಥಾನ ನೀಡದ ಹಿನ್ನೆಲೆಯಲ್ಲಿ ಗದಗ-ಬೇಟಗೇರಿ ನಗರಸಭೆ ಸದಸ್ಯರೆಲ್ಲ ಗದಗ ಜಿಲ್ಲಾಧಿಕಾ-ರಿಗಳಿಗೆ ಸಾಮೂಹಿಕವಾಗಿ ರಾಜೀನಾಮೆ ನೀಡಿ ಹೈಕಮಾಂಡ್ ವಿರುದ್ಧ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ. ಈ ವೇಳೆ ರಾಜೀನಾಮೆಗೆ ಬಂದ ಸದಸ್ಯರಿಗೆ ತರಾತುರಿಯಲ್ಲಿ ರಾಜೀನಾಮೆ ಬೇಡ ಅಂತಾ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್ ಮನವೊಲಿಸಿದರೂ ಸಹ ಹೆಚ್ ಕೆ ಪಾಟೀಲ್ ದೇವರಿದ್ದಂತೆ ದೇವರಿಲ್ಲದ ಗುಡಿಯಲ್ಲಿ ಪೂಜಾರಿಗಳೇ ಅಂತಾ ನಗರಸಭೆಯ ಕಾಂಗ್ರೆಸ್ ಸದಸ್ಯರು ಹಾಗೂ ನಾಮನಿರ್ದೇಶಿತ ಸದಸ್ಯರು ಹೆಚ್.ಕೆ ಪಾಟೀಲರ ಇಲ್ಲದ ಸರ್ಕಾರ ಅಂಗವನ್ನು ಕಳೆದುಕೊಂಡಂತೆ ಅಂತಾ ಆಕ್ರೋಶ ವ್ಯಕ್ತಪಡಿಸಿ ಜಿಲ್ಲಾಧಿಕಾರಿಗಳಿಗೆ ರಾಜೀನಾಮೆ ನೀಡಿದ್ದಾರೆ.

17 ಜನ ಚುನಾಯಿತರು, 5 ಜನ ನಾಮನಿರ್ದೇಶನ ಸದಸ್ಯರು ರಾಜೀನಾಎ ನೀಡಿದ್ದಾರೆ. ಮೈಸೂರು, ಬೆಂಗಳೂರು, ಹಾಸನ, ಕಲಬುರಗಿ ಸಚಿವ ಸ್ಥಾನ ಕೊಟ್ಟು ಲೀಡರ್ ಗಳನ್ನು ಬೆಳೆಸುತ್ತಿದ್ದಾರೆ. ಉತ್ತರ ಕರ್ನಾಟಕಕ್ಕೆ ಯಾವಾಗಲೂ ಅನ್ಯಾಯ ಮಾಡುತ್ತಲೇ ಬಂದಿದ್ದಾರೆ ಎಂದರಲ್ಲದೇ, ಉತ್ತರ ಕರ್ನಾಟಕ ಪ್ರತ್ಯೇಕ ಮಾಡಿ ಕೊಟ್ಟುಬಿಡಿ ಎಂದು ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಅವರನ್ನು ಒತ್ತಾಯಿಸಿದ್ದಾರೆ. ನಮಗೆ ಅನ್ಯಾಯ ಆಗಿದೆ, ಒಂದೂ ಕಪ್ಪು ಚುಕ್ಕಿ ಇಲ್ಲದ ವ್ಯಕ್ತಿಗೆ ಅನ್ಯಾಯ ಆಗಿದೆ. ನಾಯಕರುಗಳು ಬಂದಾಗ ನಾವು ಜನ ಸೇ-ರಿಸಬೇಕು, ಕುರ್ಚಿ ಹಾಕಿಸಬೇಕು, ನಿಮಗೆ ವಾವ್ ವಾವ್ ಅನ್ನಬೇಕು ನಾವು. ಎಲ್ಲಿಯವರೆಗೂ ಸಚಿವಸ್ಥಾನ ಕೊಡೋದಿಲ್ಲವೋ ಅಲ್ಲಿಯವರೆಗೂ ಹೋರಾಟ ಮಾಡ್ತೇವೆ ಎಂದ ನಗರಸಭೆ ಸದಸ್ಯರು ಎಚ್ಚರಿಕೆ ನೀಡಿದ್ದಾರೆ.

## ಆ.8 ರಂದು ಸಂಗೀತ ಸಂಜೆ, ಹಿರಿಯ ನಟ ಶ್ರೀನಾಥ್ ಆಗಮನ

ಜನಶ್ರೀ ಟೈಮ್ಸ್ ಸುದ್ದಿ

**ಗದಗ:** ಗಾನಲಹರಿ ಸಾಂಸ್ಕೃತಿಕ, ಕಲಾ ಸಂಸ್ಥೆ ಹಾವೇರಿ, ಅಜೆಯ ಮ್ಯೂಜಿಕಲ್ ಅಕಾಡಮಿ ಕೊಪ್ಪಳ ಇವರ ಸಹಯೋಗದಲ್ಲಿ ಆ. 8 ರಂದು ನಗರದ ಭೀಮಸೇನ್ ಜೋಷಿ ರಂಗಮಂದಿರದಲ್ಲಿ ಸಂಗೀತ ಸಂಜೆ ಕಾರ್ಯಕ್ರಮ ನಡೆಯಲಿದ್ದು, ಕನ್ನಡ ಚಲನ ಚಿತ್ರ ನಟ ಡಾ. ಶ್ರೀನಾಥ್ ಆಗಮಿಸಲಿದ್ದಾರೆ ಎಂದು ಶೀಲಾ ಪಾಟೀಲ ಹೇಳಿದರು.




ಇಲ್ಲಿನ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ಕಾರ್ಯಕ್ರಮದ ಸಾನಿಧ್ಯವನ್ನು ಪ.ಪೂ ಡಾ. ಕಲ್ಲಯ್ಯಜ್ಜನವರು, ಪ.ಪೂ ಶ್ರೀ ಶಿವಶಾಂತವೀರ ಶರಣ-ರು ವಹಿಸಿಕೊಳ್ಳಲಿದ್ದು, ಫೀರಸಾಬ್ ಕೌತಾಳ್ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಿದ್ದಾರೆ ಎಂದರು. ಅಧ್ಯಕ್ಷತೆಯನ್ನು ಶೀಲಾ ವೀರನಗೌಡ ಪಾಟೀಲ ವಹಿಸಿಕೊಳ್ಳಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕ ಡಾ. ಎಚ್. ಕೆ. ಪಾಟೀಲ, ಸಭಾಪತಿ ಜಿ. ಎಸ್. ಪಾಟೀಲ, ಸಿ. ಸಿ. ಪಾಟೀಲ, ಸಚಿನ್ ಪಾಟೀಲ, ರಾಜಶೇಖರ ಕಲ್ಲೂರ, ಡಾ. ಬಸವರಾಜ ಬಳ್ಳಾರಿ, ಗವಿಸಿದ್ದಪ್ಪ ಪಲ್ಲೇದ, ಡಾ. ಶ್ರೀಧರ ಕುರಡಗಿ, ಸಿದ್ದರಾಮೇಶ್ವರ ಗಡೇದ, ವಿಜಯಕುಮಾರ ಗಡ್ಡಿ, ಇಮಾಮ್ ಮೊರಬದ ಸೇರಿದಂತೆ ಹಲವರು ಉಪಸ್ಥಿತರಿರಲಿದ್ದಾರೆ ಎಂದರು. ಈ ವೇಳೆ ಅಮರ ಜವಳಿ, ಶಶಾಂಕ್ ಗಜಾಕೋಶ ಇದ್ದರು.

## ಸಕಲೇಶಪುರದ ಬಳಿ ಗುಡ್ಡ ಕುಸಿತದಿಂದ ರದ್ದಾಗಿದ್ದ ರೈಲು ಸಂಚಾರ ಪುನರಾರಂಭ



ಸಕಲೇಶಪುರ: ತಾಲ್ಲೂಕಿನಲ್ಲಿ ಮಳೆಯಿಂದ ಎಡಕುಮರಿ ಹಾಗೂ ಶಿರವಾಗಿಲು ನಡುವಿನ ರೈಲ್ವೆ ಹಳಿ ಮೇಲೆ ಗುಡ್ಡ ಕುಸಿತ ಉಂಟಾದ ಹಿನ್ನಲೆಯಲ್ಲಿ ಮಣ್ಣನ್ನು ತೆರವುಗೊಳಿಸಲಾಗಿದ್ದು, ಈ ಮಾರ್ಗದಲ್ಲಿ ರೈಲುಗಳು ಸಂಚಾರವನ್ನು ಪುನರಾರಂಭಿಸಿವೆ.

ಗುಡ್ಡ ಕುಸಿತ ಉಂಟಾಗುವ ಪ್ರದೇಶಗಳಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸುವಂತೆ ರೈಲ್ವೆ ಇಲಾಖೆಯ ಉನ್ನತಾಧಿಕಾರಿಗಳು ತಿಳಿಸಿದ್ದಾರೆ.

### ಮಾನವ ಕಳ್ಳಸಾಗಾಣಿಕೆ ಹಾಗೂ ಜೀತ ಪದ್ದತಿಕಾರ್ಮಿಕ ವಿರೋಧಿ ಜಾಗೃತಿ ಅಭಿಯಾನ

# ಜೀತ ಪದ್ಧತಿ ತಡೆಗೆ ಸಮನ್ವಯ ಅಗತ್ಯ

ಜನಶ್ರೀ ಟೈಮ್ಸ್ ಸುದ್ದಿ

**ಗದಗ:** ಮಾನವ ಕಳ್ಳಸಾಗಾಣಿಕೆ ಮತ್ತು ಜೀತ ಪದ್ಧತಿಯಂತಹ ಸಾಮಾಜಿಕ ಪಿಡುಗುಗಳ ವಿರುದ್ಧ ಜಾಗೃತಿ ಮೂಡಿಸಲು ಹಾಗೂ ಇವುಗಳನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಜಿಲ್ಲೆಯ ಎಲ್ಲಾ ಇಲಾಖೆಗಳು ಒಂದಾಗಿ ಶ್ರಮಿಸುವುದು ಅತ್ಯಗತ್ಯ ಎಂದು ಹಿರಿಯ ದಿವಾಣಿ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್. ಶಿವನಗೌಡ್ರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಮಂಗಳವಾರ ಆಗಸ್ಟ್ ಮಾನವ ಕಳ್ಳಸಾಗಾಣಕೆ ಹಾಗೂ ಜೀತ ಪದ್ದತಿ ಮುಕ್ತ ಕರ್ನಾಟಕ ನಮ್ಮ ಸಂಕಲ್ಪ ನಮ್ಮ ಜವಾಬ್ದಾರಿ ಎಂಬ ಘೋಷ ವಾಕ್ಯದೊಂದಿಗೆ ಜಾಗೃತಿ ಅಭಿಯಾನ ಕಾರ್ಯಕ್ರಮಕ್ಕೆ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮತ್ತು ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಬೆಂಗಳೂರಿನಲ್ಲಿ ನಡೆದ ರಾಜ್ಯಮಟ್ಟದ ಕಾರ್ಯಾಗಾರದಲ್ಲಿ ಜೀತ ಪದ್ಧತಿಯಿಂದ ಮುಕ್ತರಾದವರ ಅನುಭವ ಹಾಗೂ ಅವರನ್ನು ರಕ್ಷಿಸಿದ ವಿಧಾನಗಳನ್ನು ಪ್ರತ್ಯಕ್ಷವಾಗಿ ವೀಕ್ಷಿಸಿರುವುದಾಗಿ ತಿಳಿಸಿದ ಅವರು, ಗದಗ ಜಿಲ್ಲೆಯಲ್ಲೂ ಕಾನೂನು ಸೇವಾ ಪ್ರಾಧಿಕಾರ ಹಾಗೂ ಜಿಲಾಡಳಿತದ ಎಲ್ಲಾ ಇಲಾಖೆಗಳ ಸಹಯೋಗದೊಂದಿಗೆ ಈ ಜಾಗೃತಿ ಅಭಿಯಾನಕ್ಕೆ ಸಂಪೂರ್ಣ ಬೆಂಬಲ ನೀಡಲಾಗುವುದು ಎಂದು ಭರವಸೆ ನೀಡಿದರು. ನಿಯಮಾನುಸಾರ ಕೆಲಸಕ್ಕೆ ತಕ್ಕ ಸೂಕ್ತ ವೇತನ ನೀಡದಿರುವುದು ಸಹ ಜೀತ ಪದ್ಧತಿಯ ಒಂದು




ರೂಪವೇ ಆಗಿದೆ. ಈ ಕುರಿತು ಪ್ರತಿಯೊಬ್ಬರೂ ಜಾಗೃತರಾಗಬೇಕಿದೆ. ಮಾನವ ಕಳ್ಳಸಾಗಾಣಿಕೆ ಮತ್ತು ಜೀತ ಪದ್ಧತಿಗೆ ಮುಖ್ಯ ಕಾರಣ ಮಕ್ಕಳು ಶಾಲೆಯಿಂದ ಹೊರಗುಳಿಯುವುದು. ಶಾಲೆಯಿಂದ ಹೊರಗುಳಿಯುವ ಮಕ್ಕಳನ್ನು ಗುರುತಿಸಿ ಅವ-ರಿಗೆ ಶಿಕ್ಷಣದ ಹಕ್ಕು ತಲುಪಿಸಿದರೆ ಈ ಪಿಡುಗನ್ನು ಆರಂಭದಲ್ಲೇ ತಡೆಯಬಹುದು ಎಂದರು.

ಜೀತ ಪದ್ಧತಿ ಮತ್ತು ಮಾನವ ಕಳ್ಳಸಾಗಾಣಿಕೆಯಂತಹ ಕೃತ್ಯಗಳು ಹೆಚ್ಚಾಗಿ ನಾಲ್ಕು ಗೋಡೆಗಳ ಮಧ್ಯೆ (ರಹಸ್ಯವಾಗಿ) ನಡೆಯುತ್ತವೆ. ಇವುಗಳನ್ನು ಪತ್ತೆ ಹಚ್ಚಲು ಸಾರ್ವಜನಿಕರ ಸಹಕಾರ ಅಗತ್ಯ. ಸಂತ್ರಸ್ತರನ್ನು ಬರಿ ಮುಕ್ತಗೊಳಿಸುವುದಷ್ಟೇ ಅಲ್ಲದೇ, ಅವರಿಗೆ ಸೂಕ್ತ ಬಿಡುಗಡೆ ಪತ್ರ, ಆರ್ಥಿಕ ನೆರವು, ಕೌಶಲ್ಯ ತರಬೇತಿ ಹಾಗೂ ಉದ್ಯೋಗಾವಕಾಶ ಕಲ್ಪಿಸಿ ಪುನರ್ವಸತಿ ಕಲ್ಪಿಸಿದಾಗ ಮಾತ್ರ ಈ ಪ್ರಕ್ರಿಯೆ ಪೂರ್ಣಗೊಳ್ಳುತ್ತದೆ ಎಂದರು. ಎಲ್ಲಾ ಇಲಾಖೆಗಳ ಅಧಿಕಾರಿಗಳು ಈ ನಿಟ್ಟಿನಲ್ಲಿ ಕಾರ್ಯಾಚರಿಸುತ್ತಿದ್ದು, ಜೀತ ಪದ್ಧತಿ ಹಾಗೂ ಮಾನವ ಕಳ್ಳಸಾಗಾಣಿಕೆ ಮುಕ್ತ ಜಿಲ್ಲೆಯನ್ನಾಗಿಸಲು ಜಂಟಿಯಾಗಿ ಶ್ರಮಿಸಲಾಗುವುದು ಎಂದು ಹಿರಿಯ ದಿವಾಣಿ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ. ಎಸ್. ಶಿವನಗೌಡ್ರ ಅವರು ಹೇಳಿದರು.

ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ಅಧ್ಯಕ್ಷತೆ ವಹಿಸಿ ಮಾತನಾಡಿ ಹಕ್ಕಿನ ವಂಚನೆ ಮಾಡಿಕೊಂಡು ಜೀತದಾಳಾಗಿ ದುಡಿಸಿಕೊಳ್ಳುವುದು, ಅತ್ಯಲ್ಪ ವೇತನ ನೀಡುವುದು ಹಾಗೂ ಮಾನವೀಯತೆ ಇಲ್ಲದೆ ಕಷ್ಟಪಟ್ಟು ಕೆಲಸ ಮಾಡಿಸಿಕೊಳ್ಳುವುದು ಸಹ ಒಂದು ರೀತಿಯ ಜೀತ ಪದ್ಧತಿಯೇ ನಿರ್ಮೂಲನೆ ಆಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ತಿಳಿಸಿದರು. ಜೀತ ಪದ್ಧತಿಯನ್ನು ನಡೆಸುವವರು ಮತ್ತು ಅದನ್ನು ನೋಡಿಯೂ ಸುಮ್ಮನಿರುವವರ ನಡುವೆ ದೊಡ್ಡ ವ್ಯತ್ಯಾಸವಿಲ್ಲ. ಅಂತಹ ಕೃತ್ಯಗಳನ್ನು ಕಂಡು ಸುಮ್ಮನಿರುವುದು ಬಹಳ ದೊಡ್ಡ ಅಪರಾಧ. ಸಾರ್ವಜನಿಕರ ಗಮನಕ್ಕೆ ಇಂತಹ ಪ್ರಕರಣಗಳು ಬಂದ ತಕ್ಷಣ ನೇರವಾಗಿ ತಡೆಯಲು ಸಾಧ್ಯವಾಗದಿದ್ದರೂ ಸಂಬಂಧಪಟ್ಟ ಅಧಿಕಾ-ರಿಗಳು ಮತ್ತು ಇಲಾಖೆಯ ಗಮನಕ್ಕೆ ತರುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ ಎಂದರು. ನಮ್ಮ ಜಿಲ್ಲೆಯಲ್ಲಿ ನಿಕಟಪೂರ್ವದಲ್ಲಿ ಜೀತ ಪದ್ಧತಿಯ ಪ್ರಕರಣಗಳು ಕಂಡುಬಂದಿರಲಿಲ್ಲ. ಇತ್ತೀಚೆಗೆ ಬಂದಿದ್ದ ಒಂದು ದೂರಿನ ಮೇರೆಗೆ ಪರಿಶೀಲಿಸಿದಾಗ ಅದು ಬಾದಾಮಿಗೆ ಸಂಬಂಧಪಟ್ಟಿರುವುದು ಎಂದು ತಿಳಿದುಬಂತು.

> **ಜೀತ ಪದ್ಧತಿ ಮುಕ್ತ ಜಿಲ್ಲೆಗೆ ಕರೆ:**
> ಗದಗ ಜಿಲ್ಲೆಯು ಸಂಪೂರ್ಣವಾಗಿ ಜೀತ ಪದ್ಧತಿಯಿಂದ ಮುಕ್ತವಾಗಿರಬೇಕು ಎಂಬುದು ನಮ್ಮ ಆಶಯ. ಈ ಜಾಗೃತಿ ಅಭಿಯಾನವು ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸಲು ಮತ್ತು ಎಲ್ಲಾದರೂ ಇಂತಹ ತಪು ?ಪಗಳು ನಡೆಯುತ್ತಿದ್ದರೆ ಅವುಗಳನ್ನು ತಕ್ಷಣವೇ ತಡೆದು ಕ್ರಮ ಕೈಗೊಳ್ಳಲು ಸಹಕಾರಿಯಾಗಲಿದೆ.
> ಜೀತ ಪದ್ಧತಿ ಹಾಗೂ ಮಾನವ ಕಳ್ಳಸಾಗಾಣಿಕೆ ನಿರ್ಮೂಲನೆಯ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಪ್ರತಿಯೊಬ್ಬರ ಜೊತೆ ಗದಗ ಜಿಲ್ಲಾಡಳಿತವು ಸದಾ ಬೆಂಬಲವಾಗಿ ನಿಲ್ಲಲಿದೆ.
>
> **ಸಿ.ಎನ್.ಶ್ರೀಧರ್ ಜಿಲ್ಲಾಧಿಕಾರಿ ಗದಗ**

ತಕ್ಷಣವೇ ಬಾದಾಮಿ ಅಧಿಕಾರಿಗಳೊಂದಿಗೆ ಸಂವಹನ ನಡೆಸಿ, ಸಂತ್ರಸ್ತರನ್ನು ಬಿಡುಗಡೆಗೊಳಿಸಿ ಅವರಿಗೆ ಸೂಕ್ತ ನೆರವು ಒದಗಿಸಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ರಾಧಾ ಮಣ್ಣೂರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಎಸ್.ಎಸ್. ನೀಲಗುಂದ, ಜಿಲ್ಲಾ ಬಾಲಕಾರ್ಮಿಕ ಇಲಾಖೆಯ ಯೋಜನಾ ನಿರ್ದೇಶಕ ಸಂದೀಪ್ ಪಾಟೀಲ್, ಬಿ.ಜೆ.ಎಮ್ ಸ್ವಯಂ ಸೇವಾ ಸಂಸ್ಥೆ ಪ್ರಾದೇಶಿಕ ಮುಖ್ಯಸ್ಥರು ವೇಣುಗೋಪಾಲ, ಹಿರಿಯ ನಂತರದ ಆರೈಕೆ ಸಹವರ್ತಿ ಸಮಾಜ ಸೇವಕಿ ಚಿತ್ರಾ .ವಿ. ಸೇರಿದಂತೆ ಉದಯೋನ್ಮುಖ ಸ್ವಯಂ ಸೇವಾ ಸಂಸ್ಥೆ ಸಿಬ್ಬಂದಿಗಳು ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ವಿದ್ಯಾರ್ಥಿಗಳ ಗಮನಕ್ಕೆ

ಜನಶ್ರೀ ಟೈಮ್ಸ್ ಸುದ್ದಿ

ಗದಗ: ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 5ನೇ ಗ್ಯಾರೆಂಟಿ ಯೋಜನೆಯಾದ ಯುವನಿಧಿ ಯೋಜನೆಯಲ್ಲಿ ಪದವೀದರರಿಗೆ 3000 ಮತ್ತು ಡಿಪ್ಲೋಮದರರಿಗೆ 1500 ಗಳನ್ನು ನಿರುದ್ಯೋಗಿ ಭತ್ಯಯಾಗಿ ನೀಡುತ್ತಿದ್ದು 2023, 2024, 2025 ಹಾಗೂ 2026ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಯಾಗಿ 180 ದಿನಗಳನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿರುತ್ತದೆ.

ಅಭ್ಯರ್ಥಿಗಳು ಯುವನಿಧಿ ಯೋಜನೆಯ ಪ್ರಯೋಜನ ಪ್ರತಿ ತಿಂಗಳು ಪಡೆಯಲು, ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಾಗಿಲ್ಲವೆಂದು ಸ್ವಯಂ ಘೋಷಣೆಯನ್ನು ಪ್ರತಿ ಮಾಹೆ (ತಿಂಗಳು) 1 ರಿಂದ 25 ರೊಳಗಾಗಿ ಸಲ್ಲಿಸಬೇಕು. ಮತ್ತು ಹೊಸದಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ದಾಖಲೆ ಪರಿಶೀಲನೆಗಾಗಿ ತಮ್ಮ ಎಲ್ಲಾ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಜಿಲ್ಲಾ ಆಡಳಿತ ಭವನ 2ನೇಯ ಮಹಡಿ ರೂಂ.ನಂ:-215 ಕ್ಕೆ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ತಿಳಿಸಿದೆ. ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08372-220609, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾ ಆಡಳಿತ ಭವನ 2ನೇಯ ಮಹಡಿ ರೂಂ.ನಂ:-215 ಕಚೇರಿಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಯಾದ ಬಸವಂತ ಪಿ.ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇರ ಸಂದರ್ಶನ

ಜನಶ್ರೀ ಟೈಮ್ಸ್ ಸುದ್ದಿ

ಗದಗ: ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ನೇರ ಸಂದರ್ಶನವಿದ್ದು ಆಗಸ್ಟ್ 5ರಂದು ಬೆಳಗ್ಗೆ 10 ಗಂಟೆಗೆ ವಿವೇಕಾನಂದ ನಗರ 4ನೇ ಅಡ್ಡ ರಸ್ತೇ ಸಾಯಿ ಬಾಬಾ ದೇವಸ್ಥಾನ ಹಿಂದುಗಡೆ ಕೆ.ಎಚ್.ಬಿ ಕಾಲೋನಿ ಇಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಸದರಿ ನೇರ ಸಂದರ್ಶನದಲ್ಲಿ ಈ ಕೆಳಗಿನ ಕಂಪನಿಗಳು ಭಾಗವಹಿಸಲಿದೆ.

ನೇರ ಸಂದರ್ಶನದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, 2 ರೆಸ್ಯೂಮ(ಬಯೋಡಾಟಾ) ಪ್ರತಿಗಳು ಮತ್ತು ಆದ-ಾರ ಕಾರ್ಡ್ ಝೆರಾಕ್ಸ್ ನೊಂದಿಗೆ ಭಾಗವಹಿಸಬಹುದು. ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಯುವನಿಧಿ ಯೋಜನೆಯ ಫಲಾನುಭವಿಗಳು ಈ ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕೆಂದು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 9880690167, 6363330688, ಕ್ಕೆ ಸಂಪರ್ಕಿಸಲು ಕೋರಲಾಗಿದೆಯೆಂದು ಜಿಲ್ಲಾ ಉದ್ಯೋಗಾಧಿಕಾ-ರಿಯಾದ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಜನಶ್ರೀ ಟೈಮ್ಸ್ ಸುದ್ದಿ

ಗದಗ: ರಾಜ್ಯದ ಕೃಷಿ ಉತ್ಪಾದನೆ ಗಣನೀಯ ಪ್ರಮಾಣದಲ್ಲಿ ಹೆಚ್ಚಳವಾಗಲು ರೈತರ ಶ್ರಮ ಮತ್ತು ಕೃಷಿಯಲ್ಲಿ ಸಕ್ರಿಯ ಪಾಲುದಾರಿಕೆ ಪ್ರಮುಖ ಕಾರಣವಾಗಿರುತ್ತದೆ. ಅಂತಹ ರೈತರನ್ನು ಗುರುತಿಸಲು ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟಗಳಲ್ಲಿ ಕೃಷಿ ಪ್ರಶಸ್ತಿ ಬಹುಮಾನಗಳನ್ನು ನೀಡಲಾಗುತ್ತಿದೆ. ಈ ಯೋಜನೆಯಡಿಯಲ್ಲಿ ವಿವಿಧ ಹಂತಗಳಲ್ಲಿ ಆಯ್ಕೆ ಮಾಡಲಾದ ಬೆಳೆಗಳಲ್ಲಿ ಬೆಳೆ ಸ್ಪರ್ಧೆ ನಡೆಸಿ ಪ್ರತಿ ಬೆಳೆಗೂ ಮೂರು ಬಹುಮಾನಗಳನ್ನು ನೀಡಲಾಗುತ್ತಿದೆ. ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಹಾಗೂ ಉತ್ಪಾದಕತೆ ಹೆಚ್ಚಿಸಲು ರೈತರಲ್ಲಿ ಒಂದು ಆರೋಗ್ಯಕರ ಸ್ಪರ್ಧಾತ್ಮಕ ಮನೋಭಾವನೆಯನ್ನು ಬೆಳೆಸುವುದೇ ಈ ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ.

ಕೃಷಿ ಪ್ರಶಸ್ತಿಗಾಗಿ ಅರ್ಜಿಗಳನ್ನು ಆನ್ ಲೈನ್ ನಲ್ಲಿ ನೋಂದಾಯಿಸಬೇಕಿದೆ. ಇದಕ್ಕಾಗಿ ಕೃಷಿ ಇಲಾಖೆಯ ಕೆ-ಕಿಸಾನ ಪೋರ್ಟಲ್ ನಲ್ಲಿ ನೂತನವಾಗಿ ಕೃಷಿ ಪ್ರಶಸ್ತಿಗೆ ಅರ್ಜಿ ನಮೂನೆಯನ್ನು ಅಳವಡಿಸಲಾಗಿರುತ್ತದೆ. ಸಿಟಿಜನ್ ಲಾಗಿನ್ ಅಥವಾ ರೈತ ಸಂಪರ್ಕ ಕೇಂದ್ರದ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ/ಸೇವಾ ಕೇಂದ್ರ/ ಸ್ವಂತಃ, ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಸದರಿ ಕೆ-ಕಿಸಾನ್ ಪೋರ್ಟಲ್ ರಡಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ಎಫ್.ಐ.ಡಿಯನ್ನು ಬಳಸಿಕೊಂಡು ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. 2026-27ನೇ ಸಾಲಿನ ಗದಗ ಜಿಲ್ಲೆಯಲ್ಲಿ ಕೃಷಿ ಪ್ರಶಸ್ತಿ ಯೋಜನೆಯಡಿ ಬೆಳೆಸ್ಪರ್ಧೆಗಾಗಿ ಮುಂಗಾರು ಹಂಗಾಮಿನಲ್ಲಿ ನೋಂದಾಯಿಸಬಹುದಾದ ಬೆಳೆಗಳು. ಹೆಸರು ಮುಂಗಾರು (ಮಳೆಯಾಶ್ರಿತ), ಗೋವಿನ ಜೋಳ ಮುಂಗಾರು (ಮಳೆಯಾಶ್ರಿತಚಿ), ಶೇಂಗಾ ಮುಂಗಾರು(ಮಳೆಯಾಶ್ರಿತ), ರೈತ ಬಾಂಧವರಲ್ಲಿ ಬೆಳೆ ಸ್ಪರ್ಧೆಗೆ ನೋದಾಯಿಸಲು ಈ ಕೆಳಕಂಡ ದಾಖಲೆಗಳನ್ನು ಸಲ್ಲಿಸಬೇಕಿರುತ್ತದೆ. ಪಹಣಿ, ಪರಿಶಿಷ್ಟ ಜಾತಿ/ಪ-ರಿಶಿಷ್ಟ ಪಂಗಡದ ರೈತರಾದಲ್ಲಿ ಜಾತಿ ಪ್ರಮಾಣ ಪತ್ರ, ರೈತರ ಛಾಯಾಚಿತ್ರ. ಗುರುತಿನ ಚೀಟಿ. ಬ್ಯಾಂಕ ಪುಸ್ತಕದ ಪ್ರತಿ ಇತ್ಯಾದಿ. ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಅರ್ಜಿ ಶುಲ್ಕ ರಹಿತವಾಗಿರುತ್ತದೆ. 2026-27 ನೇ ಸಾಲಿನ ಮುಣಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಅರ್ಜಿ ಸಲ್ಲಿಸಲು 31ನೇ ಅಗಸ್ಟ 2026 ಕೊನೆಯ ದಿನಾಂಕವಾಗಿದೆ. ಸದರಿ ಬೆಳೆ ಬೆಳೆದ ಆಸಕ್ತ ರೈತರು ಬೆಳೆ ಸ್ಪರ್ಧೆ ಯೋಜನೆಯಡಿ ಶುಲ್ಕರಹಿತವಾಗಿ ದಿನಾಂಕ: 31.08.2026 ರೊಳಗಾಗಿ ಸಂಬಂದಿಸಿದ ರೈತ ಸಂಪರ್ಕ ಕೇಂದ್ರಗಳ ಮೂಲಕ ಅಥವಾ ಸ್ವಂತಃ ಆನ್ ಲೈನ್ ಮೂಲಕ ಲಿಂಕ ಬಳಸಿ ನೋದಾಯಿಸಿಕೊಳ್ಳಲು ಜಂಟಿ ಕೃಷಿ ನಿರ್ದೇಶಕರು, ಗದಗ ಜಿಲ್ಲೆಯ ರೈತ ಬಾಂಧವರಲ್ಲಿ ಕೋರಿದ್ದಾರೆ, ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಲು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜನಶ್ರೀ ಟೈಮ್ಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಸಚಿವ ಸ್ಥಾನ ಸಿಗದ ಶಾಸಕರಿಂದ ಗಂಭೀರ ಹೋರಾಟಕ್ಕೆ ಸಿದ್ಧತೆ



ಬೆಂಗಳೂರು: ಸಚಿವ ಸಂಪುಟ ವಿಸ್ತರಣೆಯಲ್ಲಿ ಅವಕಾಶ ವಂಚಿತರಾದ ಕಾಂಗ್ರೆಸ್ ಶಾಸಕರ ಅಸಮಾಧಾನ ತೀವ್ರಗೊಳ್ಳುತ್ತಿದ್ದು, ಹಿರಿಯ ಹಾಗೂ ಅನುಭವಿ ಶಾಸಕರು ಸಂಘಟಿ-ತರಾಗಿ ಮುಂದಿನ ರಾಜಕೀಯ ನಡೆ ಕುರಿತು ಸಮಾಲೋಚನೆ ಆರಂಭಿಸಿದ್ದಾರೆ.

ಸಾಮೂಹಿಕವಾಗಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸುವ ಜೊತೆಗೆ, ಬೇಡಿಕೆಗಳಿಗೆ ಸ್ಪಂದನೆ ಸಿಗದಿದ್ದರೆ ಸಾಮೂಹಿಕ ರಾಜೀನಾಮೆ ಸೇರಿದಂತೆ ಕಠಿಣ ನಿರ್ಧಾರಗಳ ಬಗ್ಗೆ ಚರ್ಚೆ ನಡೆಯುತ್ತಿದೆ ಎನ್ನಲಾಗಿದೆ. ಕೆಲವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವ ಎಚ್ಚರಿಕೆಯನ್ನೂ ನೀಡಿದ್ದರು. ಆದರೆ, ರಾಜೀನಾಮೆ ನೀಡಿದರೆ ಅದನ್ನು ಕೂಡಲೇ ಅಂಗೀಕರಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಖಡಕ್ ಎಚ್ಚರಿಕೆ ನೀಡಿದ ಹಿನ್ನೆಲೆಯಲ್ಲಿ ಕೆಲವರು ಆ ನಿರ್ಧಾರದಿಂದ ಹಿಂದೆ ಸರಿದಿದ್ದಾರೆ ಎನ್ನಲಾಗಿದೆ. ಆದರೂ ಹಿರಿಯ ಶಾಸಕರು ಪ್ರತ್ಯೇಕ ಸಭೆ ನಡೆಸಿ ಮುಂದಿನ ರಾಜಕೀಯ ಹೆಜ್ಜೆ ಕುರಿತು ಚರ್ಚಿಸಲು ಮುಂದಾಗಿರುವುದು ಕಾಂಗ್ರೆಸ್ ವಲಯದಲ್ಲಿ ಸಂಚಲನ ಮೂಡಿಸಿದೆ. ಸಚಿವ ಸ್ಥಾನ ವಂಚಿತರಾದ ಕೆ.ಎನ್.ರಾಜಣ್ಣ, ಟಿ.ಬಿ.ಜಯಚಂದ್ರ, ಎಂ.ವೈ. ಗೋಪಾಲಕೃಷ್ಣ, ತನ್ವೀರ್ ಸೇಠ್, ದಿನೇಶ್ ಗುಂಡೂರಾವ್, ಆರ್.ವಿ.ದೇಶಪಾಂಡೆ, ಅಪ್ಪಾಜಿ ನಾಡಗೌಡ, ಡಾ. ಎಚ್.ಸಿ.ಮಹದೇವಪ್ಪ, ಎಂ.ವೈ. ಪಾಟೀಲ, ಶಿವಾನಂದ ಪಾಟೀಲ, ಕೆ. ವೆಂಕಟೇಶ್, ಎಸ್.ಆರ್.ಶ್ರೀನಿವಾಸ್, ವೆಂಕಟಶಿವಾರೆಡ್ಡಿ, ಬಸವರಾಜ ನೀಲಪ್ಪನವರ್, ರಹೀಂ ಖಾನ್, ಎಂ.ಕೃಷ್ಣಪ್ಪ, ಬಿ.ಕೆ.ಸಂಗಮೇಶ್ವರ, ಪ್ರಸಾದ್ ಅಬ್ಬಯ್ಯ, ಪಿ.ಎಂ.ಅಶೋಕ್, ಗಣೇಶ್ ಹುಕ್ಕೇರಿ, ಬೇಳೂರು ಗೋಪಾಲಕೃಷ್ಣ, ಎ.ಆರ್. ಕೃಷ್ಣಮೂರ್ತಿ, ಹಂಪನಗೌಡ ಬಾದರ್ಲಿ, ಎಸ್. ಎನ್.ನಾರಾಯಣಸ್ವಾಮಿ, ಎಚ್.ಕೆ.ಪಾಟೀಲ, ಜಿ.ಟಿ.ಪಾಟೀಲ, ಬಿ.ಆರ್.ಪಾಟೀಲ, ಆರ್.ಬಿ.ತಿಮ್ಮಾಪುರ, ಕೆ.ಷಡಕ್ಷರಿ, ಎನ್.ಎ.ಹ್ಯಾ-ರಿಸ್, ಯಶವಂತರಾಯಗೌಡ ಪಾಟೀಲ, ಕಂಪ್ಲಿ ಗಣೇಶ್ ಎಚ್.ಆರ್., ಗವಿಯಪ್ಪ, ಕೋನರೆಡ್ಡಿ, ಕೊತ್ತನೂರು ಮಂಜುನಾಥ್, ಕೆ.ವೈ.ನಂಜೇಗೌಡ, ಟಿ.ಡಿ.ರಾಜೇಗೌಡ ಸೇ-ರಿದಂತೆ ಹಲವರು ಪ್ರತ್ಯೇಕ ಸಭೆ ನಡೆಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಹಿರಿಯ ಹಾಗೂ ಕಿರಿಯ ಶಾಸಕರನ್ನೊಳಗೊಂಡ ನಿಯೋಗವು ಶೀಘ್ರದಲ್ಲೇ ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಸಂಪುಟ ವಿಸ್ತರಣೆಯಲ್ಲಿ ಉಂಟಾಗಿರುವ ಅಸಮಾಧಾನ, ಪ್ರಾದೇಶಿಕ ಹಾಗೂ ಸಾಮಾಜಿಕ ಸಮತೋಲನದ ಕೊರತೆ ಮತ್ತು ಪಕ್ಷದೊಳಗಿನ ಬೆಳವಣಿಗೆಗಳ ಕುರಿತು ಮನವರಿಕೆ ಮಾಡಿಕೊಡುವ ಚಿಂತನೆ ನಡೆಸಿದೆ. ಬೇಡಿಕೆಗಳನ್ನು ಪರಿಗಣಿಸದಿದ್ದರೆ ಸಾಮೂಹಿಕ ರಾಜೀನಾಮೆ ನೀಡಿ ಸರ್ಕಾರಕ್ಕೆ ರಾಜಕೀಯ ಮುಜುಗರ ಉಂಟುಮಾಡುವ ಆಯ್ಕೆಯ ಬಗ್ಗೆಯೂ ಕೆಲ ನಾಯಕರು ಚರ್ಚಿಸಿರುವುದಾಗಿ ತಿಳಿದುಬಂದಿದೆ. ಈ ಬೆಳವಣಿಗೆಗಳು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವ-ರಿಗೆ ಹೊಸ ತಲೆನೋವಾಗಿ ಪರಿಣಮಿಸಿದ್ದು, ಅಸಮಾಧಾನಿತ ಶಾಸಕರನ್ನು ಪ್ರತ್ಯೇಕವಾಗಿ ಕರೆದು ಮಾತುಕತೆ ನಡೆಸಿ ಸಮಾಧಾನಪಡಿಸುವ ಪ್ರಯತ್ನ ನಡೆಸುತ್ತಿದ್ದಾರೆ ಎನ್ನಲಾಗಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ನೂತನ ಸಚಿವರ ಪಟ್ಟಿಯ ಬಗ್ಗೆ ಅಸಮಾಧಾನ ಹೊಂದಿದ್ದು, ಅಸಮಾಧಾನಿತ ಶಾಸಕರೊಂದಿಗೆ ನಡೆಯುತ್ತಿರುವ ಸಂಧಾನ ಪ್ರಕ್ರಿಯೆಯಿಂದ ದೂರ ಉಳಿದಿದ್ದಾರೆ ಎಂಬ ಮಾತುಗಳು ಪಕ್ಷದ ವಲಯದಲ್ಲಿ ಕೇಳಿಬರುತ್ತಿವೆ.

ಇನ್ನೊಂದೆಡೆ ಸಚಿವ ಸ್ಥಾನದ ಖುದ್ದು ಆಕಾಂಕ್ಷಿಯಾಗಿದ್ದ ಬಿ.ಕೆ.ಹರಿಪ್ರಸಾದ್ ಅವರು ಪ್ರಸ್ತುತ ಬೆಳವಣಿಗೆಗಳ ಬಗ್ಗೆ ಅಸಮಾಧಾನ ಹೊಂದಿರುವುದಾಗಿ ಮೂಲಗಳು ತಿಳಿಸಿವೆ. ಸಂಪುಟ ವಿಸ್ತರಣೆ ವೇಳೆ ಸಚಿವರ ಪಟ್ಟಿಯನ್ನು ಮೂರು ಬಾರಿ ಪರಿಷ್ಕರಿಸಲಾಗಿದೆ ಎಂಬ ಚರ್ಚೆಯೂ ಪಕ್ಷದೊಳಗೆ ನಡೆಯುತ್ತಿದೆ. ಹಿಂದುಳಿದ ವರ್ಗಕ್ಕೆ ಸೇರಿದ ಮಂಕಾಳ ವೈದ್ಯ ಹಾಗೂ ಗಾಯತ್ರಿ ಶಾಂತೇಗೌಡ ಅವರ ಹೆಸರನ್ನು ಕೈಬಿಟ್ಟು, ಪ್ರಭಾವಿ ಕುಟುಂಬದ ಎಸ್.ಎಸ್.ಮಲ್ಲಿಕಾರ್ಜುನ್ ಅವರಿಗೆ ಅವಕಾಶ ನೀಡಿರುವುದು ಹಲವರ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಹೇಳಲಾಗುತ್ತಿದೆ. ಪಕ್ಷದಲ್ಲಿ ನಿಷ್ಠೆ, ಪ್ರಾಮಾಣಿಕತೆ ಹಾಗೂ ಸೈದ್ಧಾಂತಿಕ ಬದ್ಧತೆಗೆ ಬೆಲೆ ಇಲ್ಲದ ವಾತಾವರಣ ನಿರ್ಮಾಣವಾಗಿದೆ ಎಂಬ ಆರೋಪಗಳೂ ಕೇಳಿಬರುತ್ತಿವೆ. ಇದೇ ಪರಿಸ್ಥಿತಿ ಮುಂದುವರಿದರೆ ಹಲವರು ತಮ್ಮ ರಾಜ-ಕೀಯ ಭವಿಷ್ಯದ ಬಗ್ಗೆ ಹೊಸ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ ಎಂಬ ಚರ್ಚೆಗಳು ಕಾಂಗ್ರೆಸ್ ವಲಯದಲ್ಲಿ ಜೋರಾಗಿವೆ. 2028ರ ವಿಧಾನಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಈಗಿನ ಲೋಪಗಳನ್ನು ಸರಿಪಡಿಸುವಂತೆ ಹೈಕಮಾಂಡ್‌ಗೆ ಮನವಿ ಸಲ್ಲಿಸಲು ಹಿರಿಯ-ಕಿರಿಯ ಶಾಸಕರ ನಿಯೋಗ ಮುಂದಾಗಿದ್ದು, ಈ ಸಂಬಂಧ ಶೀಘ್ರದಲ್ಲೇ ಸಭೆ ನಡೆಸುವ ಸಾಧ್ಯತೆ ಇದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಇದೇ ವೇಳೆ ಸಚಿವ ಸ್ಥಾನ ವಂಚಿತರ ಬೆಂಬಲಿಗರು ರಾಜ್ಯದ ವಿವಿಧ ಭಾಗಗಳಲ್ಲಿ ಪ್ರತಿಭಟನೆ ಆರಂಭಿಸಿದ್ದಾರೆ. ಬೆಂಗಳೂರಿನಲ್ಲಿ ಎಂ. ಕೃಷ್ಣಪ್ಪ ಹಾಗೂ ಎನ್.ಎ.ಹ್ಯಾರಿಸ್ ಬೆಂಬಲಿಗರು ರಸ್ತೆ ತಡೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಯಚೂರು ಜಿಲ್ಲೆಯಲ್ಲಿ ಹಂಪನಗೌಡ ಬಾದರ್ಲಿ ಬೆಂಬಲಿಗರು ಪ್ರತಿಭಟನೆ ನಡೆಸಿದ್ದು, ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿಯೂ ಕಾರ್ಯಕರ್ತರ ಅಸಮಾಧಾನ ಬಹಿರಂಗಗೊಂಡಿದೆ.

# ತಾಂತ್ರಿಕ ಕ್ರಾಂತಿಯ ನೇತೃತ್ವ ವಹಿಸಲು ಕರ್ನಾಟಕ ಸರ್ಕಾರ ಬದ್ಧವಾಗಿದೆ : ಡಿಕೆಶಿ

ಬೆಂಗಳೂರು: ನ್ಯಾನೋ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಸೆಮಿಕಂಡಕ್ಟರ್‌ಗಳು, ಜೈವಿಕ ತಂತ್ರಜ್ಞಾನ ಮತ್ತು ಕ್ವಾಂಟಮ್ ತಂತ್ರಜ್ಞಾನ ಸೇರಿದಂತೆ ಡೀಪ್ ಟೆಕ್‌ಗಳ ಜಾಗತಿಕ ಕೇಂದ್ರವಾಗಿ ಬೆಂಗಳೂರನ್ನು ರೂಪಿಸುವ ಮೂಲಕ ಕರ್ನಾಟಕವು ಮುಂದಿನ ತಾಂತ್ರಿಕ ಕ್ರಾಂತಿಯ ನೇತೃತ್ವ ವಹಿಸುವಂತೆ ಮಾಡಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ನ್ಯಾನೋ ತಂತ್ರಜ್ಞಾನ ವಿಷನ್ ಗ್ರೂಪ್ ನಗರದ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿರುವ 14ನೇ ಬೆಂಗಳೂರು ಇಂಡಿಂ-ಯಾ ನ್ಯಾನೋ ಸಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬೆಂಗಳೂರು ಭಾರತವನ್ನು ಜಾಗತಿಕ ಐಟಿ ಭೂಪಟದಲ್ಲಿ ನಿಲ್ಲಿಸಿದೆ. ಈಗ ಭಾರತವನ್ನು ಜಾಗತಿಕ ಡೀಪ್-ಟೆಕ್ ಭೂಪಟದಲ್ಲಿ ನಿಲ್ಲಿಸುವ ಸಮಯ ಬಂದಿದೆ. ಸರ್ಕಾರ, ಶೈಕ್ಷಣಿಕ ಕ್ಷೇತ್ರ, ಉದ್ಯಮ ಮತ್ತು ಉದ್ಯಮಿಗಳ ನಡುವಿನ ಸಹಯೋಗದಿಂದ ಮಾತ್ರ ನಾವೀನ್ಯತೆ ಬೆಳೆಯಲು ಸಾಧ್ಯ. ಈ ಪಾಲುದಾರಿಕೆಯೇ ಕರ್ನಾಟಕದ ಬಹುದೊಡ್ಡ ಶಕ್ತಿ. ಭಾರತ ರತ್ನ ಪ್ರೊ. ಸಿ. ಎನ್. ಆರ್. ರಾವ್ ಅವರ ದೂರದೃಷ್ಟಿಯು ಸಂಶೋಧಕರ ಪೀಳಿಗೆಗೆ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಹೇಳಿದರು.

ನ್ಯಾನೋ ತಂತ್ರಜ್ಞಾನವು ಇನ್ನು ಮುಂದೆ ಕೇವಲ ಸಂಶೋಧನಾ ಪ್ರಯೋಗಾಲಯಗಳಿಗೆ ಮಾತ್ರ ಸೀಮಿತವಾಗಿಲ್ಲ. ಇದು ಆರೋಗ್ಯ ರಕ್ಷಣೆ, ಎಲೆಕ್ಟ್ರಾನಿಕ್?ಸ, ಇಂಧನ, ಕೃಷಿ, ಸಾರಿಗೆ, ಬಾಹ್ಯಾಕಾಶ, ರಕ್ಷಣೆ ಮತ್ತು ಸುಧಾರಿತ ಉತ್ಪಾದನಾ ಕ್ಷೇತ್ರಗಳನ್ನು ಪರಿವರ್ತಿಸುವ ಮೂಲಭೂತ ತಂತ್ರಜ್ಞಾನವಾಗಿದೆ ಎಂದು ಹೇಳಿದರು. ಕೃತಕ ಬುದ್ಧಿಮತ್ತೆ, ನ್ಯಾನೋ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಕ್ವಾಂಟಮ್ ತಂತ್ರಜ್ಞಾನ, ಸೆಮಿಕಂಡಕ್ಟರ್‌ಗಳು ಮತ್ತು ಸುಧಾರಿತ ಸಾಮಗ್ರಿಗಳ ಸಮಿಲನದಿಂದ ಭವಿಷ್ಯವು ರೂಪುಗೊಳ್ಳಲಿದೆ. ಈ ತಾಂತ್ರಿಕ ಕ್ರಾಂತಿಯಲ್ಲಿ ಕರ್ನಾಟಕವು ಮುಂಚೂಣಿಯಲ್ಲಿರಲು ಬಯಸುತ್ತದೆ ಎಂದು ಹೇಳಿದರು.

ಗೃಹ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಬಲಿಷ್ಠ ಸಂಶೋಧನಾ ಸಂಸ್ಥೆಗಳು, ಬೆಳೆಯುತ್ತಿರುವ ನವೋದ್ಯಮ ಪರಿಸರ ವ್ಯವಸ್ಥೆ ಮತ್ತು ಪ್ರಗತಿಪರ ನೀತಿಗಳಿಂದ ಕರ್ನಾಟಕವು ಈ ಪರಿವರ್ತನೆಗೆ ಮುನ್ನಡೆ ನೀಡಲು ಅತ್ಯುತ್ತಮ ಸ್ಥಾನದಲ್ಲಿದೆ. ಜಾಗತಿಕ ಮಟ್ಟದಲ್ಲಿ ಸ್ಪರ್ಧಾತಕವಾಗಿರುವ ಹಾಗೂ ಸಮಾಜಕ್ಕೆ ಉಪಯುಕ್ತವಾಗುವ ತಂತ್ರಜ್ಞಾನಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರವು ಉತ್ತೇಜನ ನೀಡುತ್ತಿದೆ ಎಂದರು.

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿ ಡಾ. ಎನ್. ಮಂಜುಳಾ ಮಾತನಾಡಿ, ಈ ಬಾರಿಯ ಸಮಾವೇಶದ ನ್ಯಾನೊ ತಂತ್ರಜ್ಞಾನದ ಮುಂದಿನ ಗಡಿ: ಎಐ ಮತ್ತು ಅದರಾಚೆ ಪರಿಕಲ್ಪನೆ, ಸಮನ್ವಯ, ವಾಣಿಜ್ಯೀಕರಣ ಎಂಬ ಧ್ಯೇಯವು ವಿವಿಧ ಕ್ಷೇತ್ರಗಳ ಸಹಯೋಗವನ್ನು ಉತ್ತೇಜಿಸಿ, ಹೊಸ ಸಂಶೋಧನೆಗಳನ್ನು ವಾಣಿಜ್ಯ ಬಳಕೆಗೆ ತರುವ ನಮ ಬದ್ಧತೆಯನ್ನು ಸಮರ್ಥ-ರ್ಥವಾಗಿ ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದರು. ಸಮಾರಂಭದಲ್ಲಿ ಭಾರತ ರತ್ನ ಪ್ರೊ. ಸಿ.ಎನ್. ಆರ್. ರಾವ್ ಅವರನ್ನು ವಿಜ್ಞಾನ ಕ್ಷೇತ್ರಕ್ಕೆ ಸಲ್ಲಿಸಿದ ಅಸಾಧಾರಣ ಕೊಡುಗೆ ಹಾಗೂ ಭಾರತ ಸೇರಿದಂತೆ ಜಾಗತಿಕ ಮಟ್ಟದಲ್ಲಿ ನ್ಯಾನೊ ತಂತ್ರಜ್ಞಾನ ಅಭಿವೃದ್ಧಿಪಡಿಸಲು ಪ್ರವರ್ತಕ ಪಾತ್ರ ನಿರ್ವಹಿಸಿರುವುದಕ್ಕೆ ವಿಶೇಷವಾಗಿ ಸನಾನಿಸಲಾಯಿತು.




ಬೆಂಗಳೂರು ಇಂಡಿಯಾ ನ್ಯಾನೊ ವಿಜ್ಞಾನ ಪ್ರಶಸ್ತಿಯನ್ನು ಬೆಂಗಳೂರಿನ ಸೆಂಟರ್ ಫಾರ್ ನ್ಯಾನೊ ಆ?ಯಂಡ್ ಸಾಫ್?ಟ ಮ್ಯಾಟರ್ ಸೈನ್ಸಸ್ ಸಂಸ್ಥೆಯ ನಿರ್ದೇಶಕ ಪ್ರೊ. ಬಿ.ಎಲ್.ವಿ. ಪ್ರಸಾದ್ ಅವರಿಗೆ ಪ್ರದಾನ ಮಾಡಲಾಯಿತು. ಸಮಾವೇಶದ ಭಾಗವಾಗಿ ಅಂತರರಾಷ್ಟ್ರೀಯ ಪ್ರದರ್ಶನ ಕೂಡ ಆಯೋಜಿಸಲಾಗಿದ್ದು, ಕೈಗಾ-ರಿಕೆಗಳು, ನವೋದ್ಯಮಗಳು, ಸಂಶೋಧನಾ ಪ್ರಯೋಗಾಲಯಗಳು, ಶೈಕ್ಷಣಿಕ ಸಂಸ್ಥೆಗಳು ಹಾಗೂ ತಂತ್ರಜ್ಞಾನ ಪೂರೈಕೆದಾರರು ನ್ಯಾನೊ ತಂತ್ರಜ್ಞಾನ ಕ್ಷೇತ್ರದ ಅತ್ಯಾಧುನಿಕ ಉತ್ಪನ್ನಗಳು, ತಂತ್ರಜ್ಞಾನಗಳು, ಸಂಶೋಧನೆಗಳು ಮತ್ತು ನವೋದ್ಯಮಗಳನ್ನು ಪ್ರದರ್ಶಿಸುತ್ತಿವೆ.

ಸಮಾವೇಶದಲ್ಲಿ 26 ಸಮೇಳನ ಅಧಿವೇಶನಗಳು, 80ಕ್ಕೂ ಹೆಚ್ಚು ವಿಷಯ ಪರಿಣ-ತ ಭಾಷಣಕಾರರು, 800ಕ್ಕೂ ಅಧಿಕ ಪ್ರತಿನಿಧಿಗಳು, 10ಕ್ಕೂ ಹೆಚ್ಚು ದೇಶಗಳ 50 ಪ್ರದರ್ಶಕರು ಹಾಗೂ 4,000ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಂಡಿದ್ದು, ದೇಶದ ಅತಿದೊಡ್ಡ ನ್ಯಾನೊ ತಂತ್ರಜ್ಞಾನ ಸಮಾವೇಶಕ್ಕೆ ವಿಶೇಷ ಮೆರುಗು ನೀಡಿದ್ದಾರೆ. ಸಮಾವೇಶದಲ್ಲಿ ನ್ಯಾನೊ ತಂತ್ರಜ್ಞಾನ ವಿಷನ್ ಗ್ರೂಪ್ ಅಧ್ಯಕ್ಷ ಪ್ರೊ. ನವಕಾಂತ ಭಟ್, 14ನೆ ಬೆಂಗಳೂರು ಇಂಡಿಯಾ ನ್ಯಾನೊ-ದ ಸಮೇಳನ ಕಾರ್ಯಕಾರಿ ಸಮಿತಿಯ ಅಧ್ಯಕ್ಷ ಪ್ರೊ. ಪಿ.ಎಸ್. ಅನಿಲ್ ಕುಮಾರ್ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ನಿರ್ದೇಶಕ ಭರತ್. ಎಸ್, ಇಂದುಮತಿ ರಾವ್, ಲ್ಯಾಮ್ ರಿಸರ್ಚ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ರಂಗೇಶ್ ರಾಘವನ್, ಸಿಎಂ ಆರ್ಥಿಕ ಸಲಹೆಗಾರರಾದ ಎಲ್.ಕೆ. ಅತೀಕ್ ಮುಂತಾದವರಿದ್ದರು.

# ದಾಖಲೆ ಕೊಡದ ಮನೆಗಳಿಗೆ ಗೃಹಜ್ಯೋತಿ ಯೋಜನೆಯ ಉಚಿತ ವಿದ್ಯುತ್ ಇಲ್ಲ

ಬೆಂಗಳೂರು: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಪಡೆಯುತ್ತಿರುವ ಗ್ರಾಹಕರಿಗೆ ಇಂಧನ ಇಲಾಖೆ ಶಾಕಿಂಗ್ ಸುದ್ದಿ ನೀಡಿದೆ.

ರಾಜ್ಯಾದ್ಯಂತ ನಡೆಯುತ್ತಿರುವ ಮನೆ-ಮನೆ ಸಮೀಕ್ಷೆಯಲ್ಲಿ ಅಗತ್ಯ ದಾಖಲೆಗಳು ಮತ್ತು ಮಾಹಿತಿಯನ್ನು ನೀಡದಿದ್ದರೆ ಫಲಾನುಭವಿಗಳು ಯೋಜನೆಯ ವ್ಯಾಪ್ತಿಯಿಂದ ಹೊರಗುಳಿಯುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಯಾವುದೇ ಅರ್ಹ ಗ್ರಾಹಕರು ಯೋಜನೆಯ ಸೌಲಭ್ಯದಿಂದ ವಂಚಿತರಾಗದಂತೆ ವಿಶೇಷ ಶಿಬಿರಗಳನ್ನು ಆಯೋಜಿಸುವ ಪ್ರಸ್ತಾವನೆಯನ್ನೂ ಸರ್ಕಾರದ ಮುಂದಿಡಲಾಗಿದೆ.ಇಂಧನ ಇಲಾಖೆಯ ಅಂಕಿ-ಅಂಶಗಳ ಪ್ರಕಾರ ರಾಜ್ಯದಲ್ಲಿ ಗೃಹಜ್ಯೋತಿ ಯೋಜನೆಯಡಿ 1,65,32,652 ಗೃಹ ವಿದ್ಯುತ್ ಗ್ರಾಹಕರು ನೋಂದಾಯಿಸಿಕೊಂಡಿದ್ದಾರೆ. ಇವರಲ್ಲಿ ಆಗಸ್ಟ್ 2, 2026ರವರೆಗೆ 91,50,081 ಫಲಾನುಭವಿಗಳ ಮನೆಗಳಿಗೆ ಮೀಟರ್ ರೀಡರ್‌ಗಳು ಭೇಟಿ ನೀಡಿ ಸಮೀಕ್ಷೆ ಪೂರ್ಣಗೊಳಿಸಿದ್ದು, ಇನ್ನೂ 73,82,571 ಫಲಾನುಭವಿಗಳ ಮಾಹಿತಿ ಸಂಗ್ರಹವಾಗಿಲ್ಲ. ಮನೆ-ಮನೆ ಸಮೀಕ್ಷೆಯ ಉದ್ದೇಶ ಯೋಜನೆಯ ಫಲಾನುಭವಿಗಳ ವಿವರಗಳನ್ನು ನವೀಕರಿಸುವುದು ಮತ್ತು ಯೋಜನೆಯ ಲಾಭ ಸರಿಯಾದ ಫಲಾನುಭವಿಗಳಿಗೆ ತಲುಪುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದಾಗಿದೆ. ಸಮೀಕ್ಷೆ ವೇಳೆ ಗ್ರಾಹಕರು ಮನೆಯಲ್ಲಿ ಇಲ್ಲದಿದ್ದರೆ ಅಥವಾ ಮಾಹಿತಿ ನೀಡಲು ನಿರಾಕರಿಸಿದರೆ ಅವರು ಯೋಜನೆಯ ಪಟ್ಟಿಯಿಂದ ಹೊರಗುಳಿಯುವ ಸಾಧ್ಯತೆ ಇದೆ ಎಂಬ ಎಚ್ಚರಿಕೆಯನ್ನು ಇಲಾಖೆ ನೀಡಿದೆ. ಈ




ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ರಾಜ್ಯದ ಎಲ್ಲಾ ಎಸ್ಕಾಂ ಕಚೇರಿಗಳಲ್ಲಿ ವಿಶೇಷ ಸಮೀಕ್ಷಾ ಶಿಬಿರಗಳನ್ನು ನಡೆಸಲು ಸರ್ಕಾರದ ಅನುಮತಿ ಕೋರಲಾಗಿದೆ. ಈ ಶಿಬಿರಗಳಲ್ಲಿ ಫಲಾನುಭವಿಗಳು ಸ್ವತಃ ಹಾಜರಾಗಿ ತಮ ದಾಖಲೆಗಳು ಮತ್ತು ಮಾಹಿತಿಯನ್ನು ಸಲ್ಲಿಸಬಹುದಾಗಿದೆ. ಅಲ್ಲದೆ ಮೊದಲ ಬಾರಿ ಮನೆಗೆ ಭೇಟಿ ನೀಡಿದಾಗ ಫಲಾನುಭವಿಗಳು ಸಿಗದಿದ್ದರೆ ಅಥವಾ ಮಾಹಿತಿ ನೀಡದಿದ್ದರೆ, ಮೀಟರ್ ರೀಡರ್‌ಗಳು ಮತ್ತೊಮೆ ಮನೆಗಳಿಗೆ ಭೇಟಿ ನೀಡುವಂತೆ ನಿರ್ದೇಶನ ನೀಡಲಾಗಿದೆ.

**ಸಮೀಕ್ಷೆಗೆ ಅಡ್ಡಿ:**

ಈ ನಡುವೆ ಬೆಸ್ಕಾಂ ವ್ಯಾಪ್ತಿಯ ವೈಟ್‌ಫೀಲ್ಡ್ , ಮಹದೇವಪುರ ಮತ್ತು ಸರ್ಜಾಪುರ ಸೇರಿದಂತೆ ಕೆಲವು ಪ್ರದೇಶಗಳ ದೊಡ್ಡ ಅಪಾರ್ಟ್‌ಮೆಂಟ್‌ಗಳಲ್ಲಿ ಮೀಟರ್ ರೀಡರ್‌ಗಳಿಗೆ ಪ್ರವೇಶ ನೀಡುತ್ತಿಲ್ಲ ಎಂಬ ದೂರುಗಳು ಕೇಳಿಬಂದಿವೆ. ಕೆಲ ನಿವಾಸಿಗಳು ತಮ ವೈಯಕ್ತಿಕ ಮಾಹಿತಿಯನ್ನು ಹಂಚಿಕೊಳ್ಳಲು ಹಿಂದೇಟು ಹಾಕುತ್ತಿರುವುದರಿಂದ ಸಮೀಕ್ಷೆ ಕಾರ್ಯಕ್ಕೆ ಅಡ್ಡಿಯಾಗುತ್ತಿದೆ ಎಂದು ಸಿಬ್ಬಂದಿ ತಿಳಿಸಿದ್ದಾರೆ. ಈ ಬಗ್ಗೆ ಮೀಟರ್ ರೀಡರ್‌ಗಳು ಬೆಸ್ಕಾಂ ಮುಖ್ಯ ಕಚೇರಿಯ ಗಮನಕ್ಕೂ ತಂದಿದ್ದಾರೆಂದು ತಿಳಿದುಬಂದಿದೆ.

ಕೆಲವರು ತಮ ಮಾಹಿತಿಯನ್ನು ಹಂಚಿಕೊಳ್ಳಲು ಆಸಕ್ತಿ ತೋರದಿರುವುದು ನಿಜ. ಅಂಥ ಸಂದರ್ಭಗಳಲ್ಲಿ ಆ?ಯಪ್‌ನಲ್ಲಿ ಮಾಹಿತಿ ನೀಡಲು ನಿರಾಕರಿಸಿದ್ದಾರೆ ಎಂಬ ಆಯ್ಕೆಯಿದೆ ಮತ್ತು ಫಲಾನುಭವಿಯಿಂದ ಸಹಿಯನ್ನೂ ಪಡೆಯಲಾಗುತ್ತದೆ. ಇದುವರೆಗೆ ಯಾವುದೇ ಫಲಾನುಭವಿಯನ್ನು ಪಟ್ಟಿಯಿಂದ ಕೈಬಿಡಲಾಗಿಲ್ಲ. ಯೋಜನೆಯಿಂದ ಯಾರನ್ನಾದರೂ ಹೊರಗಿಡುವ ಕುರಿತು ಅಂತಿಮ ನಿರ್ಧಾರವನ್ನು ಸರ್ಕಾರವೇ ಕೈಗೊಳ್ಳಲಿದೆ ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ ಎನ್ ಅವರು, ಸ್ಪಷ್ಟಪಡಿಸಿದ್ದಾರೆ. ಸಮೀಕ್ಷೆ ವೇಳೆ ಯಾವ ದಾಖಲೆಗಳು ಬೇಕು? ಮನೆ-ಮನೆ ಸಮೀಕ್ಷೆ ವೇಳೆ ಫಲಾನುಭವಿಗಳು ಈ ಕೆಳಗಿನ ದಾಖಲೆಗಳನ್ನು ಸಿದ್ಧವಾಗಿಟ್ಟುಕೊಳ್ಳುವಂತೆ ಅಧಿಕಾ-ರಿಗಳು ಮನವಿ ಮಾಡಿದ್ದಾರೆ. ಆಧಾರ್ ಕಾರ್ಡ್ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ ಮತದಾರರ ಗುರುತಿನ ಚೀಟಿ ಪ್ಯಾನ್ ಕಾರ್ಡ್ ಬಾಡಿಗೆ ಅಥವಾ ಲೀಸ್ ಒಪ್ಪಂದ ಪತ್ರ(ಅಗತ್ಯವಿದ್ದರೆ) ಪಡಿತರ ಚೀಟಿ ಜಾತಿ ಪ್ರಮಾಣಪತ್ರ (ಐಚ್ಛಿಕ) ಬಿಪಿಎಲ್ ಅಥವಾ ಎಪಿಎಲ್ ಕಾರ್ಡ್ ವಿವರಗಳು ಇದರ ಜೊತೆಗೆ ಫಲಾನುಭವಿಯ ವೃತ್ತಿ, ವಾಸಿಸುವ ಸ್ಥಳ ಸೇರಿದಂತೆ ಕೆಲವು ಮೂಲಭೂತ ಮಾಹಿತಿಯನ್ನೂ ಮೀಟ-ರ್ ರೀಡರ್‌ಗಳು ದಾಖಲಿಸುತ್ತಿದ್ದಾರೆ. ಇಲ್ಲಿವರೆಗೆ ಬೆಸ್ಕಾಂ ವ್ಯಾಪ್ತಿಯಲ್ಲಿ 37,28,114, ಸಿಇಎಸ್‌ಸಿ (ಮೈಸೂರು) ವ್ಯಾಪ್ತಿಯಲ್ಲಿ 11,09,782, ಗೆಸ್ಕಾಂ (ಕಲಬುರಗಿ) ವ್ಯಾಪ್ತಿಯಲ್ಲಿ 8,50,786, ಹೆಸ್ಕಾಂ (ಹುಬ್ಬಳ್ಳಿ-ಧಾರವಾಡ) ವ್ಯಾಪ್ತಿಯಲ್ಲಿ 22,03,401, ಮೆಸ್ಕಾಂ (ಮಂಗಳೂರು) ವ್ಯಾಪ್ತಿಯಲ್ಲಿ 12,31,289 ಹಾಗೂ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರ ಸಂಘದ ವ್ಯಾಪ್ತಿಯಲ್ಲಿ 26,709 ಫಲಾನುಭವಿಗಳ ಸಮೀಕ್ಷೆ ಪೂರ್ಣಗೊಂಡಿದೆ. 26,997 ಕೋಟಿಗೂ ಅಧಿಕ ವೆಚ್ಚ ಆಗಸ್ಟ್ 2023ರಲ್ಲಿ ಆರಂಭವಾದ ಗೃಹಜ್ಯೋತಿ ಯೋಜನೆಗಾಗಿ ಮೇ 2026ರವರೆಗೆ ರಾಜ್ಯ ಸರ್ಕಾರ ಒಟ್ಟು ರೂ.26,997.54 ಕೋಟಿ ವೆಚ್ಚ ಮಾಡಿದೆ. ಇದರಲ್ಲಿ ಬೆಸ್ಕಾಂ ವ್ಯಾಪ್ತಿಯಲ್ಲೇ ಅತಿ ಹೆಚ್ಚು 12,577.61 ಕೋಟಿ ರೂ. ವೆಚ್ಚವಾಗಿದೆ. ಈ ನಡುವೆ ರಾಜ್ಯ ಸರ್ಕಾರದ ಅತ್ಯಂತ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳು ಸಮೀಕ್ಷೆಯಲ್ಲಿ ಕಡ್ಡಾಯವಾಗಿ ಸಹಕರಿಸಬೇಕು ಎಂದು ಇಂಧನ ಇಲಾಖೆ ಮನವಿ ಮಾಡಿದೆ.

## ಸೇನೆ ನಡೆಸಿದ ಡ್ರೋನ್ ದಾಳಿಗೆ 35 ಸುಡಾನ್ ನಾಗರಿಕರು ಬಲಿ



ಕೈರೋ: ಸುಡಾನ್‌ನ ಡಾರ್ಫರ್ ಪ್ರದೇಶದ ಸಿವಿಲ್ ನ್ಯಾಯಾಲಯದ ಮೇಲೆ ಸುಡಾನ್ ಸೇನೆ ನಡೆಸಿದ ಡ್ರೋನ್ ದಾಳಿಯಲ್ಲಿ ಕನಿಷ್ಠ 35 ಜನರು ಸಾವನ್ನಪ್ಪಿದ್ದಾರೆ ಎಂದು ಮಾನವ ಹಕ್ಕುಗಳ ಗುಂಪು ತಿಳಿಸಿದೆ.

ಸುಡಾನ್‌ನಲ್ಲಿ ದೌರ್ಜನ್ಯಗಳನ್ನು ದಾಖಲಿಸುವ ಸ್ವತಂತ್ರ ಗುಂಪು ಎಮರ್ಜೆನ್ಸಿ ಲಾಯರ್ಸ್,ಡ್ರೋನ್‌ಗಳು ಉತ್ತರ ಡಾರ್ಫರ್ ರಾಜ್ಯದ ಅಲ್-ಜಾವಿಯಾ ಗಾರಾ ಗ್ರಾಮದಲ್ಲಿರುವ ಸಿವಿಲ್ ನ್ಯಾಯಾಲಯದ ಪ್ರಧಾನ ಕಚೇರಿಯನ್ನು ಗುರಿಯಾಗಿಸಿಕೊಂಡಿವೆ ಎಂದು ಹೇಳಿದೆ, ಇದು ಈ ಪ್ರದೇಶದಲ್ಲಿ ನ್ಯಾಯಾಂಗ ಮತ್ತು ಸಾಮಾಜಿಕ ಪಾತ್ರವನ್ನು ವಹಿಸುವ ನಾಗರಿಕ ಸೌಲಭ್ಯವಾಗಿದೆ. ನಾಗರಿಕರು ಮತ್ತು ನಾಗರಿಕ ವಸ್ತುಗಳ ಮೇಲೆ ದಾಳಿ ನಡೆಸುವುದು ಅಂತರರಾಷ್ಟ್ರೀಯ ಮಾನವೀಯ ಕಾನೂನಿನ ಗಂಭೀರ ಉಲ್ಲಂಘನೆಯಾಗಿದೆ ಎಂದು ಗುಂಪು ಹೇಳಿಕೆಯಲ್ಲಿ ತಿಳಿಸಿದೆ ಮತ್ತು ತನಿಖೆಗೆ ಒತ್ತಾಯಿಸಿದೆ. ಸಂಘರ್ಷ ಮೇಲ್ವಿಚಾರಣಾ ಗುಂಪಿನ ಆರ್ಮ್ಡ್ ಕಾನ್ಫ್ಲಿಕ್ಟ್ ಲೊಕೇಶನ್ ಮತ್ತು ಈವೆಂಟ್ ಡೇಟಾ ಪ್ರಕಾರ, ಸುಡಾನ್ ಏಪ್ರಿಲ್ 2023 ರಲ್ಲಿ ಅರೆಸೈನಿಕ ರಾಪಿಡ್ ಸಪೋರ್ಟ್ ಫೋರ್ಸಸ್ ಮತ್ತು ಸುಡಾನ್ ಮಿಲಿಟರಿ ನಡುವೆ ಸಂಪೂರ್ಣ ಯುದ್ಧಕ್ಕೆ ಧುಮುಕಿತು, ಕನಿಷ್ಠ 59,000 ಜನರು ಸಾವನ್ನಪ್ಪಿದರು. ನೆರವು ಗುಂಪುಗಳು ಈ ಅಂಕಿ ಅಂಶವು ಕಡಿಮೆಯಾಗಿದೆ ಮತ್ತು ನಿಜವಾದ ಸಂಖ್ಯೆ ಹಲವು ಪಟ್ಟು ಹೆಚ್ಚಿರಬಹುದು ಎಂದು ಹೇಳುತ್ತವೆ.ಡ್ರೋನ್ ಯುದ್ಧವು ದೇಶದ ಯುದ್ಧದಲ್ಲಿ ಒಂದು ಸಹಿಯಾಗಿದೆ, ಎರಡೂ ಕಡೆಯವರು ದಾಳಿಗಳನ್ನು ನಡೆಸುತ್ತಿದ್ದಾರೆ. ವಿಶ್ವಸಂಸ್ಥೆಯ ಪ್ರಕಾರ, ಇದು ಈಗ ಸುಡಾನ್‌ನಲ್ಲಿ ಸಾವಿಗೆ ಪ್ರಮುಖ ಕಾರಣವಾಗಿದೆ, ಇದು 2026 ರ ಮೊದಲ ನಾಲ್ಕು ತಿಂಗಳಲ್ಲಿ ನಾಗರಿಕ ಸಾವುಗಳಲ್ಲಿ ಶೇಕಡಾ 80 ರಷ್ಟು ಆಗಿದೆ.ಸುಡಾನ್ ಸೈನ್ಯವು ಕಾಮೆಂಟ್‌ಗಾಗಿ ವಿನಂತಿಗಳಿಗೆ ಪ್ರತಿಕ್ರಿಯಿಸಲಿಲ್ಲ.

## ಆ.12ರ ವರೆಗೆ ಪೀಣ್ಯ ಫ್ಲೈಓವರ್ ಮೇಲೆ ಸಂಚಾರ ನಿರ್ಬಂಧ




ಬೆಂಗಳೂರು: ರಾಷ್ಟ್ರೀಯ ಹೆದ್ದಾರಿ 4ರ ಪೀಣ್ಯ ಎಲಿವೇಟೆಡ್ ಫ್ಲೈಓವರ್ ಮೇಲೆ ಡಾಂಬರೀಕರಣ ಕಾಮಗಾರಿ ಕೈಗೊಂಡಿರುವುದರಿಂದ ಸಾರ್ವಜನಿಕರ ಸುಗಮ ಸಂಚಾರದ ದೃಷ್ಟಿಯಿಂದ ಇಂದಿನಿಂದ ಆ.12 ರ ವರೆಗೆ ರಾತ್ರಿ 10 ಗಂಟೆಯಿಂದ ಬೆಳಗ್ಗೆ 5 ಗಂಟೆಯವರೆಗೆ ವಾಹನ ಸಂಚಾರ ನಿರ್ಬಂಧಿಸಲಾಗಿದೆ.

ಈ ಅವಧಿಯ ಶನಿವಾರ ಮತ್ತು ಭಾನುವಾರ ರಾತ್ರಿ 12 ಗಂಟೆಯಿಂದ ಬೆಳಗ್ಗೆ 5 ಗಂಟೆಯವರೆಗೆ ಪೀಣ್ಯ ಎಲಿವೇಟೆಡ್ ಫ್ಲೈಓವರ್ ಮೇಲೆ ತುಮಕೂರು ಕಡೆಗೆ ಹೋಗುವ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗುತ್ತದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಈ ಕಾಮಗಾರಿ ಕೈಗೊಳ್ಳಲಾಗಿದ್ದು, ಪೀಣ್ಯ ಎಲಿವೇಟೆಡ್ ಫ್ಲೈಓವರ್ ಮೇಲೆ ಎಸ್‌ಆರ್‌ಎಸ್ ಅಪ್ಪರ್ ರ್ಯಾಂಪ್‌ದಿಂದ ಕೆನ್ನಮೆಟಲ್ ವಿಡಿಯಾ ಡೌನ್ ರ್ಯಾಂಪ್ ವರೆಗೆ ಫ್ಲೈಓವರ್ ಮೇಲೆ ಸಂಚಾರ ನಿರ್ಬಂಧಿಸಲಾಗಿದೆ. ಪರ್ಯಾಯ ಮಾರ್ಗ: ಬೆಂಗಳೂರಿನಿಂದ ನೆಲಮಂಗಲ ಕಡೆಗೆ ಸಂಚರಿಸುವ ವಾಹನಗಳು ಎಸ್‌ಆರ್‌ಎಸ್ ಅಪ್ಪರ್ ರ್ಯಾಂಪ್ ಫ್ಲೈಓವರ್ ಕೆಳಭಾಗಗದ ಎನ್‌ಹೆಚ್ 4 ರಸ್ತೆ ಮತ್ತು ಸರ್ವಿಸ್ ರಸ್ತೆ ಮೂಲಕ ಎಸ್‌ಆರ್‌ಎಸ್ ಜಂಕ್ಷನ್, ಪೀಣ್ಯ ಪೊಲೀಸ್ ಠಾಣೆ ಜಂಕ್ಷನ್, ಜಾಲಹಳ್ಳಿ ಕ್ರಾಸ್, ದಾಸರಹಳ್ಳಿ ಜಂಕ್ಷನ್, 8ನೇ ಮೈಲಿ ಜಂಕ್ಷನ್ ಮುಖಾಂತರ ಪಾರ್ಲೆ ಜಿ ಟೋಲ್ ಮೂಲಕ ಸಂಚರಿಸಬಹುದಾಗಿದೆ.ಸಾರ್ವಜನಿಕರು ಸಹಕರಿಸುವಂತೆ ಸಂಚಾರಿ ಪೊಲೀಸರು ಮನವಿ ಮಾಡಿದ್ದಾರೆ.

## ಸಕಲೇಶಪುರದ ಬಳಿ ಗುಡ್ಡ ಕುಸಿತದಿಂದ ರದ್ದಾಗಿದ್ದ ರೈಲು ಸಂಚಾರ ಪುನರಾರಂಭ



ಸಕಲೇಶಪುರ: ತಾಲ್ಲೂಕಿನಲ್ಲಿ ಮಳೆಯಿಂದ ಎಡಕುಮರಿ ಹಾಗೂ ಶಿರವಾಗಿಲು ನಡುವಿನ ರೈಲ್ವೆ ಹಳಿ ಮೇಲೆ ಗುಡ್ಡ ಕುಸಿತ ಉಂಟಾದ ಹಿನ್ನಲೆಯಲ್ಲಿ ಮಣ್ಣನ್ನು ತೆರವುಗೊಳಿಸಲಾಗಿದ್ದು, ಈ ಮಾರ್ಗದಲ್ಲಿ ರೈಲುಗಳು ಸಂಚಾರವನ್ನು ಪುನರಾರಂಭಿಸಿವೆ.

ಕಳೆದ ಶನಿವಾರ ರಾತ್ರಿ ಮಳೆಯಿಂದಾಗಿ ಬೆಟ್ಟದ ಮಣ್ಣು ಮತ್ತು ಬಂಡೆಗಳು ಕುಸಿದು ರೈಲ್ವೆ ಹಳಿ ಮೇಲೆ ಉರುಳಿಬಿದ್ದಿತ್ತು. ಇದರಿಂದ ಬೆಂಗಳೂರು, ಕರಾವಳಿ, ಕೇರಳ ಭಾಗವನ್ನು ಸಂಪರ್ಕಿಸುವ ಪ್ರಮುಖ ರೈಲುಗಳ ಸಂಚಾರ ಸಂಪೂರ್ಣವಾಗಿ ಬಂದ್ ಆಗಿತ್ತು. ಕೂಡಲೇ ರೈಲ್ವೆ ಇಲಾಖೆಯ ತಾಂತ್ರಿಕ ತಂಡ ಹಾಗೂ ಕಾರ್ಮಿಕರು ಮಳೆಯ ನಡುವೆಯೂ ಮೂರುದಿನಗಳ ಹಗಲಿರುಳು ಕಾರ್ಯಾಚರಣೆ ನಡೆಸಿ ರೈಲ್ವೆ ಹಳಿ ಮೇಲೆ ಬಿದ್ದಿದ್ದ ಮಣ್ಣನ್ನು ಸಂಪೂರ್ಣವಾಗಿ ತೆರವುಗೊಳಿಸಿ ಸಂಚಾರ ಸುಗಮಗೊಳಿಸಿದ್ದಾರೆ. ಗುಡ್ಡ ಕುಸಿತ ಉಂಟಾಗುವ ಪ್ರದೇಶಗಳಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸುವಂತೆ ರೈಲ್ವೆ ಇಲಾಖೆಯ ಉನ್ನತಾಧಿಕಾರಿಗಳು ತಿಳಿಸಿದ್ದಾರೆ.

# ಜೆನ್ ಝಿ ಜೊತೆ ಆರ್‌ಎಸ್‌ಎಸ್ ಸಂವಾದವನ್ನು ಪ್ರಶ್ನಿಸಿದ ಭಟ್ಟಾಚಾರ್ಯ



ನವದೆಹಲಿ: ಸಿಪಿಐ(ಎಂಎಲ್) ಲಿಬರೇಶನ್ ಪ್ರಧಾನ ಕಾರ್ಯದರ್ಶಿ ದೀಪಂಕರ್ ಭಟ್ಟಾಚಾರ್ಯ ಅವರು ಆರ್‌ಎಸ್‌ಎಸ್ ಯುವಜನರನ್ನು ತಲುಪುವ ಬಗ್ಗೆ ಪ್ರಶ್ನಿಸಿದ್ದು, ಸಂಘ ಪರಿವಾರ ಹದಿಹರೆಯದವರೊಂದಿಗೆ ಸಂಪರ್ಕ ಸಾಧಿಸಲು ಪ್ರಯತ್ನಿಸುವ ಮೊದಲು ಅವರಿಗೆ ಅತ್ಯಾಚಾರ ಮತ್ತು ಕೊಲೆ ಬೆದರಿಕೆ ನೀಡುವುದನ್ನು ನಿಲ್ಲಿಸಬೇಕು ಎಂದು ಹೇಳಿದ್ದಾರೆ.

ಆಗಸ್ಟ್ 6 ರಂದು ಮುಂಬೈನ ನೀತಾ ಮುಖೇಶ್ ಅಂಬಾನಿ ಕೇಂದ್ರದಲ್ಲಿ ಆರ್-ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ 100 ನಗರಗಳ 15-19 ವರ್ಷ ವಯಸ್ಸಿನ ಸುಮಾರು 2,000 ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂಬ ವರದಿಗಳಿಗೆ ಪ್ರತಿಕ್ರಿಯಿಸಿದ ಭಟ್ಟಾಚಾರ್ಯ, ಕಾರ್ಯಕ್ರಮದ ಪ್ರಮಾಣ ಪ್ರಭಾವಶಾಲಿ ಆದರೆ ಅದರ ಉದ್ದೇಶವನ್ನು ಪ್ರಶ್ನಿಸಿದ್ದಾರೆ. ಜೆನ್ ಝಿಗಳನ್ನು ತಲುಪಲು ಆರ್‌ಎಸ್-ಎಸ್ ಸಾಕಷ್ಟು ಹತಾಶವಾಗಿದೆ ಎಂದು ವರದಿಯಾಗಿದೆ. ಮೋಹನ್ ಭಾಗವತ್ 100 ನಗರಗಳಿಂದ ಕರೆತರಲಾದ 15 ರಿಂದ 19 ವರ್ಷ ವಯಸ್ಸಿನ 2,000 ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಲು ಸಿದ್ಧರಾಗಿದ್ದಾರೆ. ಸಂಖ್ಯೆಗಳು ಪ್ರಭಾವಶಾಲಿಯಾಗಿವೆ, ಆದರೆ ಸಂಪರ್ಕ ಏನಾಗಿರುತ್ತದೆ? ಅವರು ಹೇಳಿದರು.

ಆಡಳಿತ ವ್ಯವಸ್ಥೆಯು ಯುವ ಪ್ರತಿಭಟನಾಕಾರರ ವಿರುದ್ಧ ಪ್ರತಿಕೂಲವಾಗಿದೆ ಎಂದು ಹೇಳಿಕೊಂಡ ಭಟ್ಟಾಚಾರ್ಯ, ಮೋದಿ ಈಗಾಗಲೇ ಸಂಸ್ಕೃತಿ ಆಘಾತದ ಬಗ್ಗೆ ಮಾತನಾಡಿದ್ದಾರೆ, ಭಾರತದ ದಾರಿತಪ್ಪಿದ ಹೆಣ್ಣುಮಕ್ಕಳ ವಿರುದ್ಧ ಪಿತೃಪ್ರಧಾನ ಪೂರ್ವಾಗ್ರಹಗಳನ್ನು ಪ್ರಚೋದಿಸುತ್ತಿದ್ದಾರೆ. ಆನ್‌ಲೈನ್ ಮತ್ತು ಆಫ್‌ಲೈನ್‌ನಲ್ಲಿ ಸಂಘಟಿತ ಪ್ರತಿಕ್ರಿಯೆಯು 15 ವರ್ಷ ವಯಸ್ಸಿನ ಮಕ್ಕಳನ್ನು ಕ್ಷಮೆಯಾಚಿಸುವ ವೀಡಿಯೊಗಳನ್ನು ನೀಡುವಂತೆ ಒತ್ತಾಯಿಸುತ್ತಿದೆ ಎಂದು ಹೇಳಿದರು. ಬಿಜೆಪಿ ನಾಯಕ ರಮೇಶ್ ಬಿಧುರಿ ಜಂತರ್ ಮಂತರ್ ಪ್ರತಿಭಟನಾಕಾರರನ್ನು ಪಂಕ್ಚರ್ ಮೆಂಡರ್ಸ್ ಎಂದು ಕರೆದಿದ್ದಾರೆ, ಬಿಜೆಪಿ ಸಂಸದೆ ಕಂಗನಾ ರನೌತ್ ಜೆನ್ ಝಿ ಅವರನ್ನು ಜನರೇಷನ್ ಗಟರ್ ಎಂದು ಕರೆದಿದ್ದಾರೆ, ಮಾಜಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಪ್ರತಿಭಟನಾಕಾರರನ್ನು ಭಯೋತ್ಪಾದಕರು ಎಂದು ಕರೆದಿದ್ದಾರೆ ಮತ್ತು ಆರ್‌ಎಸ್‌ಎಸ್ ಜಂಟಿ ಪ್ರಧಾನ ಕಾರ್ಯದರ್ಶಿ ಅತುಲ್ ಲಿಮಾಯೆ ಪ್ರತಿಭಟನೆಗಳನ್ನು ಸಾಂವಿಧಾನಿಕ ವಿರೋಧಿ ಮತ್ತು ರಾಷ್ಟ್ರ ವಿರೋಧಿ ಎಂದು ಕರೆದಿದ್ದಾರೆ ಎಂದು ಅವರು ಆರೋಪಿಸಿದರು. ಆರ್-ಎಸ್‌ಎಸ್ ನಿಜವಾಗಿಯೂ ಭಾರತದ ಜೆನ್ ಝಿ ಅವರ ಮಾತನ್ನು ಕೇಳಲು ಬಯಸಿದರೆ, ಮೊದಲು ಅವರು 15 ವರ್ಷ ವಯಸ್ಸಿನ ಮಕ್ಕಳಿಗೆ ಅತ್ಯಾಚಾರ ಮತ್ತು ಮರಣದಂಡನೆ ಬೆದರಿಕೆಗಳನ್ನು ನೀಡುವುದನ್ನು ನಿಲ್ಲಿಸುವಂತೆ ಸಂಘ ಪರಿವಾರವನ್ನು ಕೇಳಲಿ ಎಂದು ಭಟ್ಟಾಚಾರ್ಯ ಹೇಳಿದರು.ಬದಲಿಗೆ ಅವರು ಮತದಾನದ ವಯಸ್ಸನ್ನು 16 ಕ್ಕೆ ಇಳಿಸಲಿ. ಇಂದಿನ ಮಾಹಿತಿ ಕ್ರಾಂತಿಯ ಡಿಜಿಟಲ್ ಯುಗದಲ್ಲಿ, 16 ವರ್ಷ ವಯಸ್ಸಿನವರು ತಮ್ಮ ರಾಜಕೀಯ ಆಯ್ಕೆಗಳನ್ನು ಮಾಡಲು ಸಾಕಷ್ಟು ಮಾಹಿತಿ ಹೊಂದಿದ್ದಾರೆ ಎಂದು ಅವರು ಹೇಳಿದರು.

# ನಟಿ ತ್ರಿಷಾ ಕುರಿತ ಕೀಳುಮಟ್ಟದ ಹೇಳಿಕೆ ನೀಡಿದ ಉದಯನಿಧಿ ಸ್ಟಾಲಿನ್ ಬಂಧನ



ಚೆನ್ನೈ" ನಟಿ ತ್ರಿಷಾ ಹಾಗೂ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ (ಟಿವಿಕೆ ಪಕ್ಷ) ಅವರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇರೆಗೆ, ತಮಿಳುನಾಡು ಪೊಲೀಸರು ವಿರೋಧ ಪಕ್ಷದ ಪ್ರಮುಖ ನಾಯಕ ಉದಯನಿಧಿ ಸ್ಟಾಲಿನ್ ಅವರನ್ನು ಮಂಗಳವಾರ ಬೆಳಿಗ್ಗೆ ಚೆನ್ನೈನಲ್ಲಿರುವ ಅವರ ನಿವಾಸದಲ್ಲಿ ಬಂಧಿಸಿದ್ದಾರೆ. ಈ ಬೆಳವಣಿಗೆಯು ತಮಿಳುನಾಡು ರಾಜಕೀಯದಲ್ಲಿ ಭಾರೀ ಕೋಲಾಹಲ ಸೃಷ್ಟಿಸಿದೆ.

ಮಂಗಳವಾರ ಬೆಳಿಗ್ಗೆ ಪೊಲೀಸರು ಉದಯನಿಧಿ ಸ್ಟಾಲಿನ್ ಅವರ ಮನೆಯ ಬಳಿ ಜಮಾಯಿಸಿ ಅವರನ್ನು ವಶಕ್ಕೆ ಪಡೆದರು. ಬಂಧನದ ಸಮಯದಲ್ಲಿಯೂ ಪೊಲೀಸರ ಬೆಂಗಾವಲಿನೊಂದಿಗೆ ನಗುತ್ತಾ ಕಾಣಿಸಿಕೊಂಡ ಉದಯನಿಧಿ, ಈ ಕ್ರಮವನ್ನು ಕೇವಲ "ತಮಾಷೆ" ಎಂದು ಕರೆದಿದ್ದು, ತಾನು ಇದರ ವಿರುದ್ಧ "ಕಾನೂನುಬದ್ಧವಾಗಿ ಹೋರಾಟ ಮಾಡುವುದಾಗಿ" ತಿಳಿಸಿದ್ದಾರೆ.

ಆದರೆ, ಈ ಬಂಧನ ರಾಜಕೀಯ ಸೇಡಿನಿಂದ ಕೂಡಿದೆ ಎಂಬ ವಾದವನ್ನು ಟಿವಿಕೆ (ಖಿಗಿಏ) ಪಕ್ಷದ ಮುಖಂಡ ಅಮೆರಿಕಾಯ್ ನಾರಾಯಣನ್ ತಳ್ಳಿಹಾಕಿದ್ದಾರೆ. "ಮುಖ್ಯಮಂತ್ರಿ ವಿಜಯ್ ಅಥವಾ ಟಿವಿಕೆ ವಿರುದ್ಧ ಮಾತನಾಡಿದ್ದಕ್ಕಾಗಿ ಅವರನ್ನು ಬಂಧಿಸಿಲ್ಲ, ಬದಲಿಗೆ ಸಾರ್ವಜನಿಕ ವೇದಿಕೆಯಲ್ಲಿ ಮಹಿಳೆಯೊಬ್ಬರನ್ನು ಕೀಳಾಗಿ ಅವಮಾನಿಸಿರುವುದಕ್ಕಾಗಿ ಕಾನೂನು ಕ್ರಮ ಕೈಗೊಳ್ಳಲಾಗಿದೆ" ಎಂದು ಅವರು ಎನ್‌ಡಿಟಿವಿ ವಾಹಿನಿಗೆ ಸ್ಪಷ್ಟಪಡಿಸಿದ್ದಾರೆ. ಅಲ್ಲದೆ, ಉದಯನಿಧಿ ಅವರ ಈ ರೀತಿಯ ಹೇಳಿಕೆಗಳನ್ನು ತೀವ್ರವಾಗಿ ಖಂಡಿಸಿರುವ ಟಿವಿಕೆ ನಾಯಕರು, ಅವರ ಹೆಸರನ್ನು "ಅಶ್ಲೀಲ ನಿಧಿ" ಎಂದು ಬದಲಾಯಿಸಬೇಕು ಎಂದು ತೀವ್ರ ವಾಗ್ದಾಳಿ ನಡೆಸಿದ್ದಾರೆ. ನಟಿಯರ ಹಾಗೂ ಮಹಿಳೆಯರ ಗೌರವಕ್ಕೆ ಧಕ್ಕೆ ತರುವಂತಹ ರಾಜಕೀಯ ನಾಯಕರ ವರ್ತನೆಗೆ ಸಾರ್ವಜನಿಕ ವಲಯದಿಂದಲೂ ತೀವ್ರ ವಿರೋಧ ವ್ಯಕ್ತವಾಗುತ್ತಿದ್ದು, ರಾಜ್ಯದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ.

ಸೋಮವಾರ ತಂಜಾವೂರಿನಲ್ಲಿ ಕಾವೇರಿ ನದಿ ನೀರಿನ ವಿವಾದದ ಕುರಿತು ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನಾ ರ್ಯಾಲಿಯನ್ನುದ್ದೇಶಿಸಿ ಉದಯನಿಧಿ ಸ್ಟಾಲಿನ್ ಮಾತನಾಡುತ್ತಿದ್ದರು. ಈ ವೇಳೆ ತಮಿಳುನಾಡು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ರಾಜ್ಯಕ್ಕೆ ಹನಿ ನೀರು ಸಿಗದಿದ್ದರೂ ಮುಖ್ಯಮಂತ್ರಿಗಳು ಮೌನವಾಗಿದ್ದಾರೆ ಎಂದು ಟೀಕಿಸಿದರು. ಈ ಸಂದರ್ಭದಲ್ಲಿ ಸಭೆಯಲ್ಲಿದ್ದ ಕೆಲವರು ನಟಿ ತ್ರಿಷಾ ಅವರ ಹೆಸರನ್ನು ಹೇಳಿ ಘೋಷಣೆಗಳನ್ನು ಕೂಗಿದರು. ಇದಕ್ಕೆ ಪ್ರತಿಕ್ರಿಯಿಸಿದ ಉದಯನಿಧಿ, ಸಾರ್ವಜನಿಕ ವೇದಿಕೆಯಲ್ಲಿ ನಟಿ ತ್ರಿಷಾ ಮತ್ತು ಮುಖ್ಯಮಂತ್ರಿ ವಿಜಯ್ ಅವರನ್ನು ಉದ್ದೇಶಿಸಿ ವಿವಾದಾತ್ಮಕ ಹಾಗೂ ಆಕ್ಷೇಪಾರ್ಹ ದ ನುಡಿಗಳನ್ನಾಡಿದ್ದರು. ಈ ಹೇಳಿಕೆಯು ಸಾಮಾಜಿಕ ಜಾಲತಾಣಗಳಲ್ಲಿ ಮತ್ತು ರಾಜಕೀಯ ವಲಯದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿತ್ತು.ಈ ಹೇಳಿಕೆಯು ಅಸಭ್ಯ, ಲೈಂಗಿಕ ವ್ಯಂಗ್ಯ ಹಾಗೂ ಮಹಿಳೆಯರ ಅಪಮಾನವೆಂದು ಟಿವಿಕೆ ಮತ್ತು ಬಿಜೆಪಿ ಪಕ್ಷಗಳು ತೀವ್ರವಾಗಿ ಖಂಡಿಸಿವೆ.ಬಂಧನದ ಭೀತಿಯ ಹಿನ್ನೆಲೆಯಲ್ಲಿ ಉದಯನಿಧಿ ನಿರೀಕ್ಷಣಾ ಜಾಮೀನು ಕೋರಿ ಮದ್ರಾಸ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ಇಂದು ಮಧ್ಯಾಹ್ನ ವಿಚಾರಣೆ ನಡೆಯಲಿದೆ. ಇದು ಕಾವೇರಿ ನೀರು ಹಾಗೂ ಸರ್ಕಾರದ ವೈಫಲ್ಯಗಳಿಂದ ಜನರ ಗಮನ ಬೇರೆಡೆ ಸೆಳೆಯಲು ವಿರೋಧ ಪಕ್ಷಗಳು ಸೃಷ್ಟಿಸಿರುವ ರಾಜಕೀಯ ಪ್ರೇರಿತ ಕಟ್ಟುಕಥೆ ಎಂದು ಡಿಎಂಕೆ ಸ್ಪಷ್ಟಪಡಿಸಿದೆ. ಮತ್ತೊಂದೆಡೆ, ಡಿಎಂಕೆ ಪಕ್ಷವು ತನ್ನ ನಾಯಕನ ಪರವಾಗಿ ನಿಂತಿದ್ದು, ಮಾಜಿ ಸಚಿವ ಟಿ ಮನೋ ತಂಗರಾಜ್ ಈ ವಿವಾದವನ್ನು ತಳ್ಳಿಹಾಕಿದ್ದಾರೆ. ಕಾವೇರಿ ಸಮಸ್ಯೆ ಮತ್ತು ಡೆಲ್ಟಾ ರೈತರ ನೈಜ ಸಮಸ್ಯೆಗಳಿಂದ ಜನರ ಗಮನವನ್ನು ಬೇರೆಡೆಗೆ ತಿರುಗಿಸಲು ವಿರೋಧ ಪಕ್ಷಗಳು ಮಾಡುತ್ತಿರುವ ರಾಜಕೀಯ ಪಿತೂರಿ ಇದಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಪ್ರಸ್ತುತ ಚೆನ್ನೈನಲ್ಲಿರುವ ಉದಯನಿಧಿ ನಿವಾಸದ ಹೊರಗೆ ಪೊಲೀಸ್ ಭದ್ರತೆ ಕಲ್ಪಿಸಲಾಗಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ನಿರೀಕ್ಷಣಾ ಜಾಮೀನು ಪಡೆದುಕೊಳ್ಳಲು ಮದ್ರಾಸ್ ಹೈಕೋರ್ಟ್‌ನಲ್ಲಿ ಅರ್ಜಿ ದಾಖಲಿಸಲಾಗಿದೆ. ನ್ಯಾಯಾಲಯದ ಇಂದಿನ ಆದೇಶದ ಮೇಲೆ ಎಲ್ಲರ ಕಣ್ಣು ನೆಟ್ಟಿದೆ.

# ಎಸ್‌ಐಆರ್ : ರಾಜ್ಯದಲ್ಲಿ ಸುಮಾರು 1 ಕೋಟಿಗೂ ಅಧಿಕ ಮಂದಿ ಡಿಲೀಟ್



ಬೆಂಗಳೂರು: ರಾಜ್ಯದಲ್ಲಿ ಸುಮಾರು ಒಂದು ಕೋಟಿಗೂ ಅಧಿಕ ಮಂದಿಯನ್ನು ಎಎಸ್‌ಡಿಡಿಒ ವಿಭಾಗದಲ್ಲಿರಿಸುವ ಮೂಲಕ ಚುನಾವಣಾ ಆಯೋಗ ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳ ಆರೋಪವನ್ನು ಸಾಬೀತುಪಡಿಸಿದೆ.

ಈ ಹಿಂದೆ ಎಸ್‌ಐಆರ್ ನಡೆದಿದ್ದ ರಾಜ್ಯಗಳಲ್ಲಿ 70 ರಿಂದ 80 ಲಕ್ಷ ಮಂದಿಯನ್ನು ಕೈಬಿಟ್ಟಿರುವ ಆರೋಪಗಳು ಕೇಳಿ ಬಂದಿದ್ದವು. ಈಗ ರಾಜ್ಯದಲ್ಲಿ ಶೇ.19.95ರಷ್ಟು ಜನರನ್ನು ಗೈರುಹಾಜರಿ, ಸ್ಥಳಾಂತರ, ಸಾವು, ತೆಗೆದು ಹಾಕುವಿಕೆ ಮತ್ತು ನಕಲಿ ವಿಭಾಗದಲ್ಲಿ ಗುರುತಿಸುವ ಮೂಲಕ ಆತಂಕ ಸೃಷ್ಟಿಸಿದೆ. ಅದರಲ್ಲೂ ಬೆಂಗಳೂರು ಮತ್ತು ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಶೇ. 50ಕ್ಕಿಂತಲೂ ಹೆಚ್ಚಿನ ಜನ ಎಎಸ್‌ಡಿಡಿಒ ವಿಭಾಗದಲ್ಲಿ ಗುರುತಿಸಿಕೊಂಡಿದ್ದಾರೆ. ಇದರಿಂದ ಆತಂಕಕ್ಕೊಳಗಾಗಿರುವ ಕಾಂಗ್ರೆಸ್ ಬಾಕಿಯಿರುವ ನಾಲ್ಕು ದಿನಗಳಲ್ಲಿ ಜಾಗ್ರತೆವಹಿಸುವಂತೆ ತಮ ಪಕ್ಷದ ಬಿಎಲ್‌ಎ-2ಗಳಿಗೆ ಎಚ್ಚರಿಕೆ ಸಂದೇಶ ರವಾನಿಸಿದೆ. ಎಎಸ್‌ಎಸ್‌ಬಿಒ ಪಟ್ಟಿಯನ್ನು ಆಧರಿಸಿ ಪರಿಶೀಲನೆ ಗೊಳಪಡಿಸಬೇಕಾದ ಮತದಾರರ ಪಟ್ಟಿಯನ್ನು ಗಮನಿಸುವಂತೆ ಮನವಿ ಮಾಡಿದ್ದಾರೆ.

ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ನಿನ್ನೆ ಬಿಡುಗಡೆ ಮಾಡಿದ ದೈನಂದಿನ ಪತ್ರಿಕಾ ಪ್ರಕಟಣೆಯ ಪ್ರಕಾರ, ರಾಜ್ಯದಲ್ಲಿ ಮತದಾರರ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಡಿ ಮನೆ ಮನೆ ಸಮೀಕ್ಷೆ ಹಾಗೂ ಎಣಿಕೆ ನಮೂನೆಗಳ (ಎನ್ಯೂಮರೇಷನ್ ಫಾರಂ-ಇಎಫ್) ಡಿಜಿಟಲೀಕರಣ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. 2026ರ ಜೂನ್ 16ರ ಮತದಾರರ ಪಟ್ಟಿಯ ಪ್ರಕಾರ ರಾಜ್ಯದಲ್ಲಿ ಒಟ್ಟು 5,54,32,314 ಮತದಾರರಿದ್ದು, ಎಲ್ಲ ಮತದಾರರಿಗೂ ಎಣಿಕೆ ನಮೂನೆಗಳನ್ನು ಮುದ್ರಿಸಿ ಬಿಎಲ್‌ಒಗಳ ಮೂಲಕ ವಿತರಿಸಲಾಗಿದೆ. ಜೂನ್ 30ರಿಂದ ಆಗಸ್ಟ್ 8ರವರೆಗೆ ಮನೆ ಮನೆ ಸಮೀಕ್ಷೆ ಹಾಗೂ ಡಿಜಿಟಲೀಕರಣ ಕಾರ್ಯ ನಡೆಯುತ್ತಿದ್ದು, ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ನೀಡಿರುವ ಮಾಹಿತಿಯಂತೆ, ಎಣಿಕೆ ನಮೂನೆ ಹಾಗೂ ಸೇರಿ ಒಟ್ಟು 5,51,91,134 ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗಿದ್ದು, ಇದು ಶೇ.99.56ರಷ್ಟು ಪ್ರಗತಿಯನ್ನು ಸೂಚಿಸುತ್ತದೆ. ಎಣಿಕೆ ನಮೂನೆಗಳ ಪೈಕಿ 4,41,31,846 ನಮೂನೆಗಳು (ಶೇ.79.61) ಡಿಜಿಟಲೀಕರಣಗೊಂಡಿದ್ದು, ಇನ್ನೂ 2,41,180 ನಮೂನೆಗಳು (ಶೇ.0.44) ಬಾಕಿ ಉಳಿದಿವೆ.

ಇದೇ ವೇಳೆ 1,10,59,288 ಮತದಾರರನ್ನು (ಎಎಸ್‌ಡಿಡಿಒ) ವಿಭಾಗದಲ್ಲಿ ಗುರುತಿಸಲಾಗಿದ್ದು, ಇದು ಒಟ್ಟು ಮತದಾರರ ಶೇ.19.95ರಷ್ಟಾಗಿದೆ. ವಿಭಾಗದಲ್ಲಿ ಗುರುತಿಸಲಾದವರಲ್ಲಿ 16,18,630 ಮಂದಿ ಪತ್ತೆಯಾಗದ ಅಥವಾ ಗೈರುಹಾಜರಿರುವ ಮತದಾರರು (ಶೇ.2.92), 66,23,832 ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡವರು (ಶೇ.11.95), 16,21,446 ಮಂದಿ ಮೃತಪಟ್ಟವರು (ಶೇ.2.93), 6,78,213 ಮಂದಿ ಈಗಾಗಲೇ ಬೇರೆಡೆ ನೋಂದಾಯಿತರಾಗಿರುವವರು (ಶೇ.1.22) ಹಾಗೂ 5,17,167 ಮಂದಿ ಇತರ ಕಾರಣಗಳಿಂದ ಗುರುತಿಸಲ್ಪಟ್ಟಿದ್ದಾರೆ. ರಾಜ್ಯದ ಮತದಾರರು ಆನ್‌ಲೈನ್ ಮೂಲಕ 6,85,711 ಎಣಿಕೆ ನಮೂನೆಗಳನ್ನು ಸಲ್ಲಿಸಿದ್ದು, ಇದು ಒಟ್ಟು ಮತದಾರರ ಶೇ.1.24ರಷ್ಟಾಗಿದೆ ಎಂದು ತಿಳಿಸಲಾಗಿದೆ.

ಪಟ್ಟಿಯನ್ನು ಈಗಾಗಲೇ ಎಲ್ಲಾ ರಾಜಕೀಯ ಪಕ್ಷಗಳಿಗೆ ಹಾಗೂ ಸಂಬಂಧಿತ ಬಿಎಲ್‌ಒಗಳಿಗೆ ಪರಿಶೀಲನೆಗಾಗಿ ನೀಡಲಾಗಿದೆ. ಯಾವುದೇ ಮತದಾರರನ್ನು ತಪ್ಪಾಗಿ ಎಎಸ್‌ಡಿಡಿಒ ವಿಭಾಗದಲ್ಲಿ ಗುರುತಿಸಲಾಗಿದೆ ಎಂದು ಕಂಡು ಬಂದಲ್ಲಿ, ಆಗಸ್ಟ್ 8ರವರೆಗೆ ಬಿಎಲ್‌ಒ ಅಥವಾ ಚುನಾವಣಾ ನೋಂದಣಿ ಅಧಿಕಾರಿ (ಇಆರ್‌ಒ) ಅವರನ್ನು ಸಂಪರ್ಕಿಸಿ ತಮ ಎಣಿಕೆ ನಮೂನೆಯನ್ನು ತಿದ್ದುಪಡಿ ಮಾಡಿಸಿಕೊಳ್ಳಬಹುದು ಎಂದು ಚುನಾವಣಾ ಆಯೋಗ ತಿಳಿಸಿದೆ. ಇದರೊಂದಿಗೆ ಜಿಬಿಎ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಹೊಸ ಮತದಾರರ ನೋಂದಣಿಗಾಗಿ ಅಗತ್ಯವಿರುವ ಫಾರಂ-6ಗಳನ್ನು ಸಂಬಂಧಿತ ಚುನಾವಣಾ ನೋಂದಣಿ ಅಧಿಕಾರಿಗಳಿಗೆ ವಿತರಿಸಲಾಗಿದೆ. ಜೂನ್ 16ರಿಂದ ಆಗಸ್ಟ್ 2ರವರೆಗೆ ರಾಜ್ಯದಲ್ಲಿ ವಿವಿಧ ಅರ್ಜಿಗಳ ಮೂಲಕ ಒಟ್ಟು 11,98,517 ಅರ್ಜಿಗಳು ಸ್ವೀಕೃತವಾಗಿವೆ. ಇದರಲ್ಲಿ ಹೊಸ ಮತದಾರರ ನೋಂದಣಿಗೆ ಫಾರಂ-6 ಅಡಿಯಲ್ಲಿ 3,61,309 ಅರ್ಜಿಗಳು, ಎನ್‌ಆರ್‌ಐ ಮತದಾರರಿಗಾಗಿ ಫಾರಂ-6ಎ ಅಡಿಯಲ್ಲಿ 3,098 ಅರ್ಜಿಗಳು, ಹೆಸರು ಅಳಿಸುವ ಫಾರಂ-7 ಅಡಿಯಲ್ಲಿ 31,050 ಅರ್ಜಿಗಳು ಹಾಗೂ ತಿದ್ದುಪಡಿ ಮತ್ತು ವರ್ಗಾವಣೆಗೆ ಫಾರಂ-8 ಅಡಿಯಲ್ಲಿ 8,03,060 ಅರ್ಜಿಗಳು ಸಲ್ಲಿಕೆಯಾಗಿವೆ. 2026ರ ಅಕ್ಟೋಬರ್ 1ರ ವೇಳೆಗೆ 18 ವರ್ಷ ಪೂರೈಸುವ ಅರ್ಹ ಯುವ ಮತದಾರರು ಫಾರಂ-6 ಹಾಗೂ ಘೋಷಣಾ ಪತ್ರದೊಂದಿಗೆ ಆನ್‌ಲೈನ್ ಅಥವಾ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳುವಂತೆ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಮನವಿ ಮಾಡಿದೆ.ಜಿಲ್ಲಾವಾರು ಪ್ರಗತಿಯಲ್ಲಿ ಚಾಮರಾಜನಗರ, ಹಾಸನ, ಚಿಕ್ಕಬಳ್ಳಾಪುರ, ಕೊಪ್ಪಳ, ಗದಗ ಹಾಗೂ ಕೊಡಗು ಜಿಲ್ಲೆಗಳು ಶೇ.100ರಷ್ಟು ಎಣಿಕೆ ನಮೂನೆಗಳ ಡಿಜಿಟಲೀಕರಣ ಪೂರ್ಣಗೊಳಿಸಿವೆ. ಬೆಂಗಳೂರು ನಗರ ವ್ಯಾಪ್ತಿಯ ಉತ್ತರ, ಮಧ್ಯ ಹಾಗೂ ದಕ್ಷಿಣ ವಿಧಾನಸಭಾ ವಿಭಾಗಗಳಲ್ಲಿ ಡಿಜಿಟಲೀಕರಣದ ಪ್ರಗತಿ ಕ್ರಮವಾಗಿ ಶೇ.51.68, ಶೇ.50.61 ಹಾಗೂ ಶೇ.47.54ರಷ್ಟಿದ್ದು, ಈ ಭಾಗಗಳಲ್ಲಿ ಗುರುತಿಸುವಿಕೆ ಪ್ರಮಾಣ ರಾಜ್ಯದ ಸರಾಸರಿಗಿಂತ ಹೆಚ್ಚಾಗಿದೆ.

# ಇದು ವ್ಯಕ್ತಿಯ ಜೀವನ ಚರಿತ್ರೆಯಲ್ಲ, ಸರ್ವರಿಗೂ ಪ್ರೇರೇಪಿಸುವಂತಹ ಜೀವನಗಾಥೆ

## ದ್ಯಾಮುಣಸಿಯ ಸಾಮಾನ್ಯ ಕುಟುಂಬದ ಹುಡುಗ ಕಟ್ಟಿದ ಶಿಕ್ಷಣ ಸಾಮ್ರಾಜ್ಯ ನಿಬ್ಬೆರಗು

### ❍ಅಕ್ಷರ ಸಂತನಿಗೆ ಅನುದಿನವೂ ಅರಾಧನೆ ಅನುಕ್ಷಣವೂ ಆಲಾಪನೆ ❍ಶಿಷ್ಯವರ್ಗ ಅಭಿಮಾನಿಗಳಿಂದ ಗೌರವ ನಮನ



# ಡಾ.ಬಿ.ಎಫ್ ದಂಡಿನ ದಂಪತಿಗೆ ಸಾರ್ವಜನಿಕ ನುಡಿನಮನ

ಜನಶ್ರೀ ಟೈಮ್ಸ್

**ಗದಗ:** ಕನಕದಾಸ ಶಿಕ್ಷಣ ಸಮಿತಿ ಗದಗ, ಡಾ ಬಿ ಎಫ್ ದಂಡಿನ ಅಭಿಮಾನಿ ಬಳಗ ವತಿಯಿಂದ ಕನಕದಾಸ ಶಿಕ್ಷಣ ಸಮಿತಿ ಗದಗ ಹುಬ್ಬಳ್ಳಿ ಬೆಳಗಾವಿಯ ಸಂಸ್ಥಾಪಕ ಅಧ್ಯಕ್ಷರಾದ ಡಾ. ಬಿ ಎಫ್ ದಂಡಿನ ಹಾಗೂ ಇವರ ಧರ್ಮಪತ್ನಿ ಹಾಗೂ ಶ್ರೀ ವಿವೇಕಾನಂದ ಶಿಕ್ಷಣ ಸಂಸ್ಥೆ ಹುಬ್ಬಳ್ಳಿಯ ಚೇರ್ಮನ್‌ರಾದ ಶ್ರೀಮತಿ ಶಕುಂತಲಾಬಾಯಿ ದಂಡಿನ ಅವರ ಸಾರ್ವಜನಿಕ ನುಡಿನಮನ ಸಭೆ ಮತ್ತು ಸ್ಮಾರಕ ಭೂಮಿಪೂಜೆ ಕಾರ್ಯಕ್ರಮ ಆಗಸ್ಟ್ 5ರಂದು ಬೆಳಗ್ಗೆ 10.30ಕ್ಕೆ ಗದಗ ನಗರದ ವಿವೇಕಾನಂದ ನಗರದಲ್ಲಿರುವ ಗಾಣಿಗ ಭವನದಲ್ಲಿ ಏರ್ಪಡಿಸಲಾಗಿದೆ.

**♦ಅಕ್ಷರ ಸಂತನಿಗೆ ನಮನಗಳು**

92 ವರ್ಷಗಳ ಸಾರ್ಥಕ ಬದುಕಿನ ನಂತರ ಡಾ. ಬಿ.ಎಫ್. ದಂಡಿನ ಅವರು ನಮ್ಮನ್ನಗಲಿದ್ದಾರೆ. ಆದರೆ, ಅವರು ಹೋಗಿದ್ದು ಕೇವಲ ದೇಹವಾಗಿ ಮಾತ್ರ. ಅವರು ಕಟ್ಟಿದ ಶಿಕ್ಷಣ ಸಂಸ್ಥೆಗಳು, ಬೆಳೆಸಿದ ವಿದ್ಯಾರ್ಥಿಗಳು, ಆಶ್ರಯ ನೀಡಿದ ಬಡ ಕುಟುಂಬಗಳು, ಪ್ರೋತ್ಸಾಹಿಸಿದ ಶಿಕ್ಷಕರು ಮತ್ತು ಸಮಾಜದಲ್ಲಿ ಮೂಡಿಸಿದ ಶಿಕ್ಷಣದ ಜಾಗೃತಿ ಅವರ ಹೆಸರನ್ನು ಚಿರಸ್ಥಾಯಿಯಾಗಿಸಿದೆ. ಇಂತಹ ಮಹಾನ್ ಶಿಕ್ಷಣ ತಪಸ್ವಿಯ ಅಗಲಿಕೆ ಉತ್ತರ ಕರ್ನಾಟಕಕ್ಕೆ ಮಾತ್ರವಲ್ಲ, ಇಡೀ ಕರ್ನಾಟಕದ ಶಿಕ್ಷಣ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ. ಡಾ. ದಂಡಿನ ಅವರ ಬದುಕು ಕೇವಲ ಒಬ್ಬ ವ್ಯಕ್ತಿಯ ಜೀವನಚರಿತ್ರೆಯಲ್ಲ; ಅದು ಸೇವೆ, ತ್ಯಾಗ, ಪರಿಶ್ರಮ, ಮಾನವೀಯತೆ ಮತ್ತು ಶಿಕ್ಷಣ ಕ್ರಾಂತಿಯ ಜೀವಂತ ಇತಿಹಾಸ.

**♦ಬಡತನದ ಮನೆಯಿಂದ ಶಿಕ್ಷಣ ಸಾಮ್ರಾಜ್ಯದವರೆಗೆ**

ರೋಣ ತಾಲೂಕಿನ ಹಿಂದುಳಿದ ಗ್ರಾಮವಾದ ದ್ಯಾಮುಣಸಿಯಲ್ಲಿ ಬಡ ಕುಟುಂಬದಲ್ಲಿ ಜನಿಸಿದ ಡಾ. ದಂಡಿನ ಅವರು ಬಾಲ್ಯದಲ್ಲಿಯೇ ಬಡತನದ ಕಹಿಯನ್ನು ಅನುಭವಿಸಿದರು. ಹೊಟ್ಟೆ ತುಂಬ ಊಟವಿಲ್ಲದ ದಿನಗಳು, ಕಷ್ಟದ ನಡುವೆ ಓದಿದ ಜೀವನ, ಉಚಿತ ಪ್ರಸಾದ ನಿಲಯಗಳಲ್ಲಿ ಊಟ ಮಾಡಿ ವಿದ್ಯಾಭ್ಯಾಸ ಮಾಡಿದ ದಿನಗಳು ಅವರ ಬದುಕಿನ ನಿತ್ಯಸಂಗಾತಿಗಳಾಗಿದ್ದವು. ಆದರೆ, ಬಡತನ ಅವರನ್ನು ಎಂದಿಗೂ ಸೋಲಿಸಲಿಲ್ಲ. "ವಿದ್ಯೆಯೇ ಜೀವನವನ್ನು ಬದಲಾಯಿಸುವ ಶಕ್ತಿ" ಎಂಬ ನಂಬಿಕೆಯನ್ನು ಅವರು ಎಂದಿಗೂ ಕೈಬಿಡಲಿಲ್ಲ. ಕಠಿಣ ಪರಿಶ್ರಮದಿಂದ ಸ್ನಾತಕೋತ್ತರ ಪದವಿ ಪಡೆದು ಪ್ರಾಧ್ಯಾಪಕರಾದರು. ಕೈತುಂಬ ಸಂಬಳ, ಗೌರವದ ಉದ್ಯೋಗ, ಸುಖದ ಬದುಕು ಎಲ್ಲವೂ ಅವರ ಮುಂದೆ ಇತ್ತು.

ಆದರೆ, ಅವರ ಮನಸ್ಸು ಒಂದೇ ಪ್ರಶ್ನೆಯನ್ನು ಕೇಳುತ್ತಿತ್ತು. "ನಾನು ಮಾತ್ರ ಬದುಕಿದರೆ ಸಾಕೇ? ನನ್ನಂತೆಯೇ ಬಡತನದಲ್ಲಿರುವ ಸಾವಿರಾರು ಮಕ್ಕಳ ಬದುಕು ಬೆಳಗಬಾರದೇ?" ಈ ಪ್ರಶ್ನೆಯೇ ಅವರ ಬದುಕಿನ ದಿಕ್ಕನ್ನೇ ಬದಲಿಸಿತು.

**♦ಪ್ರಾಧ್ಯಾಪಕ ಹುದ್ದೆಗಿಂತ ಸಮಾಜಸೇವೆಗೆ ಹೆಚ್ಚಿನ ಬೆಲೆ**







ಪ್ರಾಧ್ಯಾಪಕರಾಗಿ ಉತ್ತಮ ಸಂಬಳ ಪಡೆಯುತ್ತಿದ್ದರೂ ಆ ಬದುಕು ಅವರಿಗೆ ತೃಪ್ತಿ ನೀಡಲಿಲ್ಲ. ಸಮಾಜದ ಸೇವೆಯಲ್ಲಿಯೇ ಬದುಕಿನ ಸಾರ್ಥಕತೆ ಇದೆ ಎಂದು ಅರಿತ ಅವರು ಪ್ರಾಧ್ಯಾಪಕ ಹುದ್ದೆಗೆ ರಾಜೀನಾಮೆ ನೀಡಿ ಶಿಕ್ಷಣ ಸೇವೆಯ ದೀಕ್ಷೆಯನ್ನು ಸ್ವೀಕರಿಸಿದರು. ಅದು ಸಾಮಾನ್ಯ ನಿರ್ಧಾರವಾಗಿರಲಿಲ್ಲ. ಕುಟುಂಬದ ಭವಿಷ್ಯ, ಆರ್ಥಿಕ ಭದ್ರತೆ, ಸಮಾಜದ ಪ್ರಶ್ನೆಗಳು? ಎಲ್ಲವನ್ನೂ ಮೀರಿ ಅವರು ಶಿಕ್ಷಣವನ್ನು ತಮ್ಮ ಧರ್ಮವನ್ನಾಗಿ ಮಾಡಿಕೊಂಡರು.

**♦1965ರಲ್ಲಿ ಆರಂಭವಾದ ಅಕ್ಷರ ಕ್ರಾಂತಿ**

1960ರ ದಶಕದಲ್ಲಿ ಗ್ರಾಮೀಣ ಮಕ್ಕಳಿಗೆ ಶಿಕ್ಷಣ ಎನ್ನುವುದು ಕನಸಿನ ಮಾತಾಗಿತ್ತು. ಫೀಸು ಕಟ್ಟಲು ಸಾಧ್ಯವಾಗದ ವಿದ್ಯಾರ್ಥಿಗಳು, ಊಟದ ವ್ಯವಸ್ಥೆಯಿಲ್ಲದೆ ಶಾಲೆ ಬಿಟ್ಟ ಮಕ್ಕಳು, ಬಡತನದಿಂದ ಶಿಕ್ಷಣದಿಂದ ವಂಚಿತರಾದ ಕುಟುಂಬಗಳನ್ನು ಕಂಡ ಡಾ. ದಂಡಿನ ಅವರ ಮನಸ್ಸು ಮರುಗಿತು. ಅದರ ಫಲವಾಗಿ 1965ರಲ್ಲಿ ಕನಕದಾಸ ಉಚಿತ ಪ್ರಸಾದ ನಿಲಯ ಸ್ಥಾಪನೆಯಾಯಿತು. ಹಸಿದ ಮಗುವಿಗೆ ಮೊದಲು ಅನ್ನ ಬೇಕು. ನಂತರ ಅಕ್ಷರ. ಈ ಸತ್ಯವನ್ನು ಅರಿತ ಅವರು ಅನ್ನದಾಸೋಹದ ಜೊತೆಗೆ ಅಕ್ಷರದಾಸೋಹವನ್ನೂ ಆರಂಭಿಸಿದರು. ಅದೇ ವರ್ಷ ಮಹಾನ್ ಸಂತ ಕನಕದಾಸರ ಆದ-ರ್ಶಗಳಿಂದ ಪ್ರೇರಿತರಾಗಿ ಕನಕದಾಸ ಶಿಕ್ಷಣ ಸಮಿತಿಯನ್ನು ಸ್ಥಾಪಿಸಿದರು.

**♦ಕನಕದಾಸರ ಚಿಂತನೆಗಳೇ ಬದುಕಿನ ದಾರಿ**

"ನಹೀ ಜ್ಞಾನೇನ ಸದೃಶಂ" ಜ್ಞಾನಕ್ಕಿಂತ ಶ್ರೇಷ್ಠವಾದುದು ಯಾವುದೂ ಇಲ್ಲ ಎಂಬ ಗೀತೆಯ ಸಂದೇಶವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದರು. ಕನಕದಾಸರ "ಶೋಧಿಸೆನ್ನ ಮನದ ಕಲುಷ, ಬೋಧಿಸುತಯ್ಯ ಜ್ಞಾನವೆನಗೆ" ಎಂಬ ದಿವ್ಯವಾಣಿಯನ್ನು ಸಂಸ್ಥೆಯ ಮಾರ್ಗದರ್ಶಕ ತತ್ವವನ್ನಾಗಿ ಮಾಡಿಕೊಂಡರು. ಸತ್ಯ ಶಾಂತಿ ಶ್ರಮ ಎಂಬ ತ್ರಿವೇಣಿ ಮಂತ್ರಗಳೊಂದಿಗೆ

### ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಗರಿ

"ಶಿಕ್ಷಣ, ಸಾಹಿತ್ಯ, ಸಮಾಜಸೇವೆ ಹಾಗೂ ಸಾರ್ವಜನಿಕ ಜೀವನದಲ್ಲಿ ಸಲ್ಲಿಸಿದ ಅಮೋಘ ಸೇವೆ ಮತ್ತು ಸಾಧನೆಗಾಗಿ ಡಾ. ಬಿ. ಎಫ್. ದಂಡಿನ ಅವರಿಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಅನೇಕ ಗೌರವಗಳು ಲಭಿಸಿದ್ದವು. ಅಂತಹ ಮಹನೀಯರ ಅಗಲಿಕೆ ನಮ್ಮ ಕುಟುಂಬಕ್ಕೆ ಮಾತ್ರವಲ್ಲ, ಸಮಾಜಕ್ಕೂ ತುಂಬಲಾರದ ನಷ್ಟವಾಗಿದೆ. ಅವರ ಆದರ್ಶ ವ್ಯಕ್ತಿತ್ವ, ಸರಳತೆ, ಮಾನವೀಯ ಮೌಲ್ಯಗಳು ಮತ್ತು ಸಮಾಜಮುಖಿ ಚಿಂತನೆ ಸದಾ ನಮಗೆ ಪ್ರೇರಣೆಯಾಗಿರುತ್ತದೆ. ಅವರ ಆದರ್ಶಗಳನ್ನು ಮುಂದುವರಿಸಿಕೊಂಡು ಹೋಗುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ. ಪರಮಾತ್ಮನು ಅವರ ಆತ್ಮಕ್ಕೆ ಚಿರಶಾಂತಿ ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ."





**ಸಾರ್ವಜನಿಕ ನುಡಿನಮನ ನಿಮಿತ್ತ ವಿಶೇಷ ವರದಿ**

ಕನಕದಾಸ ಶಿಕ್ಷಣ ಸಮಿತಿ ಇಂದು ಸಾವಿರಾರು ವಿದ್ಯಾರ್ಥಿಗಳ ಬದುಕನ್ನು ರೂಪಿಸುತ್ತಿದೆ. ಹಣವಿರಲಿಲ್ಲ... ಆದರೆ ಸಂಕಲ್ಪವಿತ್ತು. ಕೈಯಲ್ಲಿ ಕೋಟಿ ಕೋಟಿ ಹಣ ಇರಲಿಲ್ಲ. ಇದ್ದಿದ್ದು ಒಂದೇ ಸಂಪತ್ತು. ಭಾವಶುದ್ಧತೆ. ಸಮಾಜದ ಸಮಾನ ಮನಸ್ಕರ ಸಹಕಾರದೊಂದಿಗೆ ಆರಂಭವಾದ ಈ ಚಿಕ್ಕ ಸಂಸ್ಥೆ ಇಂದು 65ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳ ಮಹಾವೃಕ್ಷವಾಗಿ ಬೆಳೆದಿದೆ. ಎರಡು ಸಿಬಿಎಸ್‌ಇ ಶಾಲೆಗಳು, ಐದು ಪ್ರಾಥಮಿಕ ಶಾಲೆಗಳು, ಹತ್ತು ಪ್ರೌಢಶಾಲೆಗಳು, ಎಂಟು ಪದವಿಪೂರ್ವ ಕಾಲೇಜುಗಳು, ಆರು ಪದವಿ ಕಾಲೇಜುಗಳು, ಬಿಎಸ್ ಡಬ್ಲ್ಯು ಕಾಲೇಜುಗಳು, ಡಿ.ಎಡ್., ಬಿ.ಎಡ್. ಕಾಲೇಜುಗಳು, ಹನ್ನೊಂದು ಸ್ನಾತಕೋತ್ತರ ಕೇಂದ್ರಗಳು, "ಪ್ರಸಾದ ನಿಲಯಗಳು, ಮಹಿಳಾ ವಸತಿ ನಿಲಯಗಳು, ಗ್ರಂಥ-ಾಲಯಗಳು, ಶಿಶು ಮಂದಿರಗಳು, ಇವೆಲ್ಲವೂ ಒಬ್ಬ ವ್ಯಕ್ತಿಯ ಕನಸಿನ ಸಾಕಾರ ರೂಪಗಳು.

**♦ಬಡ ವಿದ್ಯಾರ್ಥಿಗಳ ಪಾಲಿನ ದೇವರು**

ಸಂಸ್ಥೆಯ ಆರಂಭದ ದಿನಗಳಲ್ಲಿ ಅನೇಕ ಬಡ ವಿದ್ಯಾರ್ಥಿಗಳಿಗೆ ಡಾ. ದಂಡಿನ ದಂಪತಿ ತಮ್ಮ ಮನೆಯಲ್ಲಿಯೇ ಉಚಿತ ಊಟ ಮತ್ತು ವಸತಿಯ ವ್ಯವಸ್ಥೆ ಮಾಡುತ್ತಿದ್ದರು. ಅವರು ವಿದ್ಯಾರ್ಥಿಗಳನ್ನು ದಾನ ಸ್ವೀಕರಿಸುವವರಂತೆ ನೋಡಲಿಲ್ಲ. ತಮ್ಮ ಮನೆಯ ಮಕ್ಕಳಂತೆ ನೋಡಿಕೊಂಡರು. ಇಂದು ಆ ವಿದ್ಯಾರ್ಥಿಗಳಲ್ಲಿ ಅನೇಕರು ಐಎಎಸ್ ಅಧಿಕಾ-ರಿಗಳು, ವೈದ್ಯರು, ಎಂಜಿನಿಯರ್‌ಗಳು, ಪ್ರಾಧ್ಯಾಪಕರು, ನ್ಯಾಯಾಧೀಶರು, ವಿಜ್ಞಾನಿಗಳು, ಆಡಳಿತಗಾರರು ಹಾಗೂ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಯಶಸ್ಸಿನ ಹಿಂದೆ ನಿಂತಿದ್ದ ಅದೃಶ್ಯ ಶಕ್ತಿ ಡಾ. ಬಿ.ಎಫ್. ದಂಡಿನ.

**♦ಅಧ್ಯಕ್ಷರಾದರೂ ಅಹಂಕಾರ ಇರಲಿಲ್ಲ**

ಬೃಹತ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾಗಿದ್ದರೂ ಅಧಿಕಾರದ ಅಹಂಕಾರ ಅವರಿಗೆ ಎಂದಿಗೂ ಅಂಟಲಿಲ್ಲ. ಬಿಳಿ ಶುಭ್ರ ವಸ್ತ್ರ, ಮುಖದಲ್ಲಿ ನಿಷ್ಕಲ್ಮಷ ನಗು, ಸರಳ ಬದುಕು, ವಿಶಾಲ ಹೃದಯ, ಕೂಲಿಕಾರ-ರಿಂದ ಹಿಡಿದು ಅಧಿಕಾರಿಗಳವರೆಗೆ, ರೈತರಿಂದ ವಿದ್ಯಾರ್ಥಿಗಳವರೆಗೆ ಎಲ್ಲರೊಂದಿಗೆ ಒಂದೇ ರೀತಿಯ ಆತ್ಮೀಯತೆ. ಸಿಬ್ಬಂದಿಯ ಸಮಸ್ಯೆಗಳನ್ನು ಕೇಳುವುದು. ಅವರ ನೋವಿಗೆ ಸ್ಪಂದಿಸುವುದು. ಅವರ ಅಗತ್ಯಗಳನ್ನು ಪೂರೈಸುವುದು. ಇದೇ ಅವರ ನಾಯಕತ್ವ. ಆದ್ದ-ರಿಂದಲೇ ಸಿಬ್ಬಂದಿ ಅವರನ್ನು ಕೇವಲ ಅಧ್ಯಕ್ಷರಾಗಿ ಅಲ್ಲ. ಕುಟುಂಬದ ಹಿರಿಯರಾಗಿ ಕಂಡಿದ್ದರು. ಗ್ರಾಮೀಣ ಶಿಕ್ಷಣಕ್ಕಾಗಿ ಜೀವವನ್ನೇ ಅರ್ಪಿಸಿದ ಮಹಾನುಭಾವ. ನಗರಗಳಲ್ಲಿ ಮಾತ್ರವಲ್ಲ. ಗ್ರಾಮಗಳಲ್ಲಿ, ಕುಗ್ರಾಮಗಳಲ್ಲಿ ಶಿಕ್ಷಣದ ಬೆಳಕು ತಲುಪದ ಹಳ್ಳಿಗಳಲ್ಲಿ, ಶಾಲೆಗಳನ್ನು ತೆರೆದು ಗ್ರಾಮೀಣ ಮಕ್ಕಳ ಬದುಕಿಗೆ ಹೊಸ ದಿಕ್ಕು ನೀಡಿದರು.

ಗಾಂಧೀಜಿಯ ಗ್ರಾಮಸ್ವರಾಜ್ಯದ ಕನಸನ್ನು ಶಿಕ್ಷಣದ ಮೂಲಕ ಸಾಕಾರಗೊಳಿಸುವ ಪ್ರಯತ್ನ ಮಾಡಿದರು. ಅವರ ನಂಬಿಕೆ ಒಂದೇ, "ಗ್ರಾಮ ಬೆಳಗಿದರೆ ದೇಶ ಬೆಳಗುತ್ತದೆ." ಸೇವಾಭಾರತಿಯೊಂದಿಗೆ ನಿರಂತರ ಸೇವೆ, ಕನಕದಾಸ ಶಿಕ್ಷಣ ಸಂಸ್ಥೆಯ ಉಪನ್ಯಾಸಕರು ಸೇವಾಭಾರತಿ ಟ್ರಸ್ಟ್ ಸಹಯೋಗದಲ್ಲಿ ಸೇವಾಬಸ್ತಿಗಳಲ್ಲಿ ನಿರಂತರ ಸಮಾಜಸೇವೆ ನಡೆಸುತ್ತಿದ್ದಾರೆ.

ಸಮಾಜಕಾರ್ಯ ವಿಭಾಗದ ವಿದ್ಯಾರ್ಥಿಗಳ ಮೂಲಕವೂ ಅನೇಕ ಸೇವಾ ಚಟುವಟಿಕೆಗಳು ನಡೆಯುತ್ತಿವೆ. ಶಿಕ್ಷಣದ ಜೊತೆಗೆ ಸಾಮಾಜಿ-ಕ ಹೊಣೆಗಾರಿಕೆಯನ್ನೂ ವಿದ್ಯಾರ್ಥಿಗಳಲ್ಲಿ ಬೆಳೆಸುವುದು ಸಂಸ್ಥೆಯ ಪ್ರಮುಖ ಧ್ಯೇಯವಾಗಿದೆ. ಕೊರೊನಾ ಕಾಲದಲ್ಲೂ ಜೀವದಾನ ಕೋವಿಡ್-19 ಸಂದರ್ಭದಲ್ಲಿ ದೇಶದಾದ್ಯಂತ ರಕ್ತದ ಕೊರತೆ ಉಂಟಾದಾಗ ಕನಕದಾಸ ಶಿಕ್ಷಣ








ಸಂಸ್ಥೆಯ ಉಪಾಧ್ಯಕ್ಷ ಶಾಂತಣ್ಣ ಕಡಿವಾಳ ಅವರ ಸಹಯೋಗದಲ್ಲಿ ಉಪನ್ಯಾಸಕರು ಹುಬ್ಬಳ್ಳಿಯ ರಾಷ್ಟ್ರೋತ್ಥಾನ ರಕ್ತನಿಧಿ ಕೇಂದ್ರದಲ್ಲಿ ರಕ್ತದಾನ ಮಾಡಿ ಅನೇಕ ಜೀವಗಳನ್ನು ಉಳಿಸುವ ಕಾರ್ಯ ಮಾಡಿದರು. ಶಿಕ್ಷಣ ಸಂಸ್ಥೆ ಕೇವಲ ಪಾಠ ಹೇಳುವ ಸ್ಥಳವಲ್ಲ. ಸಮಾಜದ ಸಂಕಷ್ಟದ ಸಮಯದಲ್ಲಿ ಮುಂದೆ ನಿಲ್ಲುವ ಜೀವದಾನಿ ಸಂಸ್ಥೆಯೂ ಆಗಬಹುದು ಎಂಬುದನ್ನು ತೋರಿಸಿಕೊಟ್ಟರು.

**♦ವಿದ್ಯಾರ್ಥಿ ಕೇಂದ್ರಿತ ಶಿಕ್ಷಣ ವ್ಯವಸ್ಥೆ**

ಕನಕದಾಸ ಶಿಕ್ಷಣ ಸಮಿತಿಯ ಶಿಕ್ಷಣ ಸಂಸ್ಥೆಗಳಲ್ಲಿ ಉತ್ತಮ ಕಟ್ಟಡಗಳು, ಅನುಭವಿ ಶಿಕ್ಷಕರು, ಪ್ರತ್ಯೇಕ ವಸತಿ ನಿಲಯಗಳು, ವಿದ್ಯಾರ್ಥಿವೇತನ, ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮದಲ್ಲಿ ಶಿಕ್ಷಣ, ಗ್ರಂಥಾಲಯ, ಬ್ಯಾಂಕ್ ಮತ್ತು ಅಂಚೆ ಕಚೇರಿ ಸೌಲಭ್ಯ, ಪೋಷಕರ ಸಭೆಗಳು, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿಶೇಷ ಮಾರ್ಗದರ್ಶನ, ಶುದ್ಧ ಕುಡಿಯುವ ನೀರು, ವಸತಿ, ಆಹಾರ, ಆಟದ ಮೈದಾನ, ರೀಡಿಂಗ್ ರೂಮ್ ಹಾಗೂ ಟ್ಯೂಷನ್ ವ್ಯವಸ್ಥೆಯಂತಹ ಅನೇಕ ಸೌಲಭ್ಯಗಳನ್ನು ಒದಗಿಸಲಾಗಿದೆ.

ಈ ಎಲ್ಲವೂ ಶಿಕ್ಷಣವನ್ನು ಎಲ್ಲರಿಗೂ ಸುಲಭವಾಗಿ ತಲುಪಿಸುವ ಅವರ ದೃಷ್ಟಿಕೋನದ ಪ್ರತೀಕವಾಗಿದೆ. 92ನೇ ವಯಸ್ಸಿನಲ್ಲಿಯೂ ಅದೇ ಉತ್ಸಾಹ, ವಯಸ್ಸು ದೇಹಕ್ಕೆ ಮಾತ್ರ.ಮನಸ್ಸಿಗೆ ಅಲ್ಲ. 92ನೇ ವಯಸ್ಸಿನಲ್ಲಿಯೂ ಅವರು ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿ, ಗ್ರಾಮೀಣ ಮಕ್ಕಳ ಭವಿಷ್ಯ, ಹೊಸ ಯೋಜನೆಗಳು, ಸಮಾಜಸೇವೆ ಇವುಗಳ ಬಗ್ಗೆ ಅದೇ ಉತ್ಸಾಹದಿಂದ ಚಿಂತಿಸುತ್ತಿದ್ದರು. ಅವರ ಜೀವನದಲ್ಲಿ ವಿಶ್ರಾಂತಿ ಎಂಬ ಪದವೇ ಇರಲಿಲ್ಲ.



### ಸಾರ್ವಜನಿಕ ನುಡಿನಮನ

ಗದಗ ನಗರದ ಗಾಣಿಗ ಭವನದಲ್ಲಿ ಆಗಸ್ಟ್ 5ರಂದು ಬೆಳಗ್ಗೆ 10.30ಕ್ಕೆ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಶ್ರೀಮದ್ ಜಗದ್ಗುರು ಶ್ರೀ ರೇವಣಸಿದ್ದೇಶ್ವರ ಸಿಂಹಾಸನಾಧೀಶ್ವರ ಶ್ರೀ ನಿರಂಜನಾನಂದಪುರಿ ಮಹಾಸ್ವಾಮೀ-ಜಿಗಳು, ಗದಗ ಶಿವಾನಂದ ಬೃಹನ್ಮಠದ ಶ್ರೀ ಸದಾಶಿವಾನಂದ ಮಹಾಸ್ವಾಮೀಜಿಗಳು, ಕುಷ್ಟಗಿಯ ಶ್ರೀ ನಾಗಸಾಧು ಮಹಾಂತ ಸಹದೇವಾನಂದ ಗಿರಿ ಜೀ ಮಹಾರಾಜ, ಭೈರನಟ್ಟಿ ದೊರಸ್ವಾಮಿ ವಿರಕ್ತಮಠದ ಶ್ರೀ ಶಾಂತಲಿಂಗ ಮಹಾಸ್ವಾಮೀಜಿಗಳು, ಹಡಗಿನಾಳ ಶ್ರೀಮುಕ್ತೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಅಖಿಲ ಭಾರತ ವ್ಯವಸ್ಥಾ ಪ್ರಮುಖರಾದ ಮಂಗೇಶ್ ಭೇಂಡೆ, ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವರಾದ ಎಚ್ ಕೆ ಪಾಟೀಲ, ಸಿ ಸಿ ಪಾಟೀಲ, ಎಸ್ ಎಸ್ ಪಾಟೀಲ, ಪಿಜಿಆರ್ ಸಿಂಧ್ಯಾ, ವಿರೋಧ ಪಕ್ಷದ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ, ಮಾಜಿ ಶಾಸಕ ಡಿ ಆರ್ ಪಾಟೀಲ, ವಿಧಾನ ಪರಿಷತ್ ಮಾಜಿ ಸದಸ್ಯ ಎಂ ಆರ್ ಹುಲಿನಾಯ್ಕರ್, ವಿಶ್ರಾಂತ ಕುಲಪತಿ ಡಾ ತೇಜಸ್ವಿ ಕಟ್ಟಿಮನಿ ಮತ್ತು ಕನ್ನಡಪ್ರಭ ಹುಬ್ಬಳ್ಳಿ ಸ್ಥಾನಿಕ ಸಂಪಾದಕ ಮಲ್ಲಿಕಾರ್ಜುನ ಸಿದ್ದಣ್ಣನವರ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಕುರುಬ ಸಮಾಜದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ, ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಸಮಾಜ ಸೇವಕ ಶಶಿಧರ ರೊಳ್ಳಿ, ಸ್ಮಾರಕ ಸಮಿತಿ ಸದಸ್ಯ ಡಾ ಶರಣು ಗೋಗೇರಿ ತಿಳಿಸಿದ್ದಾರೆ.

"JANASHREE TIMES" Kannada daily morning Owner, Published by ANANDAYYA DANAYYA VIRAKTAMATH Address: 229/1, 3 RD CROSS VIVEKANAND NAGAR NEAR WATER TANK, GADAG, KARNATAKA - 582101. Printed at: SHIVANI PRINTERS Printers. Address: AT: HULKOTI T/D: GADAG OFFICE ADDERS: SHIVANI PRINTERS NEW COURT OPPSITE PLOT NO 28 RS NO 312/3B GARAG COMPLEX, GADAG, KARNATAKA - 582101. email: janashreetimes@gmail.com